ಸಂಪುಟ : 10 ಸಂಚಿಕೆ 7 ಪುಟ : 4+2 ಬೆಲೆ: 3.00 ಶನಿವಾರ ಫೆಬ್ರವರಿ 1 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 7 Pages : 4+2 Price : 3.00 Saturday February 1 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ-01 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 6ರಲ್ಲಿ ಹೊಂಬಳನಾಕಾ ಜನತಾ ಕಾಲೋನಿ, ಶೌಚಾಲಯದ ಹಿಂದಿನ ಭಾಗ ಮಸೂತಿ, ಎಲ್ಲಮ್ಮನ ಗುಡಿ, ಕಟಗಿ ಅಡ್ಡೆ ಕೆಲವು ಉಳಿದ ಭಾಗಗಳು, ವಾರ್ಡ್ ನಂ. 21, 20, 23, 25 ಹಾಳದಿಬ್ಬ ಓಣಿ, ಸಿ.ಟಿ. ಹಾಳ, 2 ಭಾಗ, ಸೋಮೇಶ್ವರ ಗುಡಿ, ಕಲ್ಲಬಂಡಿ, 2ನಂ. ಶಾಲೆ, ಪಲ್ಲೇದ ಅವರ ಓಣಿ, ಕೆರಕಲಮಟ್ಟಿ, ಪಡಗದ 2ಭಾಗ, ಚಿನ್ನೂರ ಲೈನ್, ಬೇವಿನಮರದಮ್ಮನ ಲೈನ್, ಎಸ್.ಟಿ.ಡಿ. ಲೈನ್, ಖಾನತೋಟ, ಹುಲಿಗೆಮ್ಮನಗುಡಿ ಉಳಿದ ಕೆಲವು ಭಾಗಗಳು,

**ವಾರ್ಡ್ ನಂ:** 30, 34, ವಡ್ಡರಗೇರಿ , 46 ಪ್ಲಾಟ್, ಕೊರವರ ಓಣಿ, ಮೂರಶಿಳ್ಳಿನ ವಕಾರ, ಡೀಪೋ ಹಿಂದಿನ ಭಾಗ, ಶಿವಾನಂದ ಗಾರ್ಡನ್ ಕೆಲವು ಉಳಿದ ಭಾಗಗಳು, ವಾರ್ಡ್ ನಂ. 12, 13, ಸಂಜೀವ ದವಾಖಾನೆ, ಭಾಗಮಾರ ಫರ್ನಿಚರ್, ಹೊಂಬಳ ಸಾಲಿನಾಥ ಸಂದಿ, ಗರಗದವರ, ಕೊಳಚೆ ಪ್ರದೇಶ, ನವಲಿಯಾರ ಲೈನ್, ಶಾಮ ಕುಲಕರ್ಣಿ 2ನೇ ಕ್ರಾಸ್, ಗುಳೇದ ಅವರ ಲೈನ್, ಇಟಗಿಯವರ ಲೈನ್, ಇದಗಾ ಕಾಂಪ್ಲೆಕ್ಸ್, ಕೊಟ್ಟೂರ ಲೈನ್, ಹಾಸ್ಟೆಲ್ ಲೈನ್, ಕಿರೇಸೂರ ಲೈನ್, ಕೆಲವು ಉಳಿದ ಭಾಗಗಳು.

**ಪ್ರಕಟಣೆ:** ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಮತ್ತು ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಅಂತಾ ಪೌರಾಯುಕ್ತರು ಪ್ರಕಟಣೆಯಲ್ಲಿ ಎಚ್ಚರಿಸಿದ್ದಾರೆ.

### ಪುರಸಭೆಯ ಸಾಮಾನ್ಯ ಸಭೆ । ಬಹುತೇಕ ವಿಷಯಗಳಿಗೆ ಸಭೆಯ ಒಪ್ಪಿಗೆ

# ಅವಧಿ ನುಂಗಿದ ಸದಸ್ಯನ ನೇಮ್ ಪ್ಲೇಟ್!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆಯಲ್ಲಿ ಶುಕ್ರವಾರ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ ಅವರ ಅಧ್ಯಕ್ಷತೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ 49 ಚರ್ಚಿತ ವಿಷಯಗಳಲ್ಲಿ ಬಹುತೇಕ ವಿಷಯಗಳಿಗೆ ಸಭೆ ಒಪ್ಪಿಗೆ ಸೂಚಿಸಿತು.

ಸಭೆ ಆರಂಭವಾಗುತ್ತಿದ್ದಂತೆಯೇ ಆಸೀನರಾದ ಸದಸ್ಯರೆಲ್ಲರ ಮುಂದೆ ಅವರವರ ಹೆಸರಿನ ನೇಮ್‌ಪ್ಲೇಟ್ ಇರಿಸಲಾಗಿದೆ. ಆದರೆ ನನ್ನ ಹೆಸರಿನ ನೇಮ್ ಪೇಟ್ ಮಾತ್ರ ಏಕೆ ಇರಿಸಿಲ್ಲ, ಉದ್ದೇಶಪೂರ್ವಕವಾಗಿಯೇ ನನ್ನನ್ನು ಅವಮಾನಿಸುವ ಕೆಲಸ ಮಾಡುತ್ತಿದ್ದೀರಿ. ನಾನು ಸಭೆಯಿಂದ ಹೊರ ಹೋಗುತ್ತೇನೆ ಎಂದ ಮಹೇಶ ಹೊಗೆಸೊಪ್ಪಿನ ಅವರ ಮಾತಿಗೆ ತಡಕಾಡಿದ ಸಿಬ್ಬಂದಿಗಳು ಅವರ ಹೆಸರಿನ ನಾಮಫಲಕ ತಂದಿಟ್ಟರು. ಆದರೆ ಅದು ಅವರು ಈ ಹಿಂದೆ ಸ್ಥಾಯಿ ಸಮಿತಿ ಅಧ್ಯಕ್ಷರಾಗಿದ್ದಾಗ ಮಾಡಿಸಿದ್ದ ನಾಮಫಲಕವಾಗಿತ್ತು. ಮುಖ್ಯಾಧಿಕಾರಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಸಂದರ್ಭದಲ್ಲಿ ಬಹುತೇಕ ಸದಸ್ಯರೂ ಸಹ ತಮ್ಮ ಅಸಮಾಧಾನ ವ್ಯಕ್ತಪಡಿಸಿದರು.

▶▶ 3ನೇ ಪುಟಕ್ಕೆ

ಪುಲಿಗೆರೆಯ ಸಾರಸ್ವತ ಲೋಕಕ್ಕೆ ಅಮೂಲ್ಯ ಸೇವೆ ಸಲ್ಲಿಸಿದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ದಿ. ಪ್ರೊ. ಸಿ.ವಿ ಕೆರಿಮನಿ ಅವರು ವಾಸಿಸುವ ವಿನಾಯಕನಗರದ ಬಡಾವಣೆಯ 2ನೇ ಮುಖ್ಯ ರಸ್ತೆಗೆ ಅವರ ಹೆಸರಿಡುವ ಬಗ್ಗೆ ಕಸಾಪ ತಾಲೂಕು ಘಟಕ, ಸಾಹಿತಿಗಳು, ಸಾರ್ವಜನಿಕರಿಂದ ಬಂದ ಮನವಿಗೆ ಸಭೆಯ ಸರ್ವಸದಸ್ಯರು ಸಂತೋಷದಿಂದ ಸರ್ವಾನುಮತದ ಒಪ್ಪಿಗೆ ಸೂಚಿಸಿದರು.



ಸಭೆಯಲ್ಲಿ ಪುರಸಭೆಯ ಉಮಾ ಮಹಾವಿದ್ಯಾಲಯದ ಶತಮಾನೋತ್ಸವ ಆಚರಿಸುವದು, ಪುರಸಭೆ ಐಡಿಎಸ್‌ಎಂಟಿ ಮಳಿಗೆಗಳ ದುರಸ್ಥಿ, ಬೀದಿ ದೀಪ ನಿರ್ವಹಣೆ, ತುಂಗಭದ್ರಾ ನೀರು ಶುದ್ಧೀಕರಣ ಘಟಕದ ನಿರ್ವಹಣೆ, ಸ್ವಚ್ಛತೆ ಸೇರಿ ಅಭಿವೃದ್ಧಿ ಕಾರ್ಯಗಳನ್ನೊಳಗೊಂಡು 49ಕ್ಕೂ ಅಧಿಕ ವಿಷಯಗಳ ಕುರಿತು ಚರ್ಚಿಸಿ ನಿರ್ಧರಿಸಲಾಯಿತು.

### 13ನೇ ಒಣ ಮೆಣಸಿನಕಾಯಿ ಮೇಳಕ್ಕೆ ಚಾಲನೆ ನೀಡಿದ ಅಬ್ಬಯ್ಯ ಪ್ರಸಾದ್

# ಬೆಳಗಾರರಿಗೆ ತರಬೇತಿ ನೀಡಲು ತರಬೇತಿ ಕೇಂದ್ರ ಸ್ಥಾಪನೆ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಬೆಳೆಗಾರರು ಬೆಳೆ ಉಳುಮೆಯಿಂದ ಹಿಡಿದು ಮಾರಾಟ ಮಾಡುವವರಿಗೆ ತರಬೇತಿ ನೀಡಲು ತರಬೇತಿ ಕೇಂದ್ರದ ಅವಶ್ಯಕತೆಯಿದೆ. ಈ ನಿಟ್ಟಿನಲ್ಲಿ ಬೆಳಗಾರರಿಗೆ ತರಬೇತಿ ನೀಡಲು ತರಬೇತಿ ಕೇಂದ್ರ ಸ್ಥಾಪನೆ ಮಾಡಲಾಗುವುದು ಎಂದು ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಅಬ್ಬಯ್ಯ ಪ್ರಸಾದ ಹೇಳಿದರು.

ಶುಕ್ರವಾರ ಅಮರಗೋಳದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ವಿವಿಧೋದ್ದೇಶ ವಸ್ತು ಪ್ರದರ್ಶನ ಆವರಣದಲ್ಲಿ ಕರ್ನಾಟಕ ರಾಜ್ಯ ಸಂಬಾರು ಪದಾರ್ಥಗಳ ಅಭಿವೃದ್ಧಿ ಮಂಡಳಿ, ತೋಟಗಾರಿಕೆ ಇಲಾಖೆ (ಜಿಲ್ಲಾ ಪಂಚಾಯತ) ಧಾರವಾಡ, ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆ ಹುಬ್ಬಳ್ಳಿ, ಅಮರಶಿವ ರೈತ ಉತ್ಪಾದಕ ಸಂಸ್ಥೆ ಸಂಶಿ (ಕುಂದಗೋಳ) ಹಾಗೂ ಉಳವಾಯೋಗಿ ರೈತ ಉತ್ಪಾದಕರ ಸಂಸ್ಥೆ ಹುಬ್ಬಳ್ಳಿ ಇವುಗಳ ಸಹಯೋಗದಲ್ಲಿ ಆಯೋಜಿಸಿದ್ದ 13ನೇ ಒಣ ಮೆಣಸಿನಕಾಯಿ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಒಣ ಮೆಣಸಿನಕಾಯಿ ಮೇಳದಲ್ಲಿ 100 ಮಳಿಗೆಗಳನ್ನು ತೆರೆಯಲಾಗಿದೆ. ಕಳೆದ ಬಾರಿ 447 ಕ್ವಿಂಟಲ್ ಮಾರಾಟದಿಂದ ರೂ. 1.37 ಕೋಟಿ ವಹಿವಾಟು ಆಗಿತ್ತು. ಕಳೆದ ಬಾರಿಗಿಂತ ಈ ವರ್ಷ ಹೆಚ್ಚು ವಹಿವಾಟು ನಡೆಯುವ ನಿರೀಕ್ಷೆಯಿದೆ. 1.50 ಲಕ್ಷ ವಿಸ್ತೀರ್ಣದಲ್ಲಿ 1.71 ಲಕ್ಷ ಮೆಟ್ರಿಕ್ ಟನ್ ಉತ್ಪನ್ನ ಬರಲಿದೆ. ಮೇಳದಿಂದ ಗ್ರಾಹಕರು ಮತ್ತು ವ್ಯಾಪಾರಸ್ಥರನ್ನು ಒಂದೇ ವೇದಿಕೆಯಡಿ ಸೇರಿಸಲಾಗುತ್ತದೆ. ಇದರಿಂದ ದಲ್ಲಾಳಿಗಳು ಪ್ರವೇಶ ಮಾಡುವುದಿಲ್ಲ. ನೇರವಾಗಿ ಗ್ರಾಹಕರು ಒಣಮೆಣಸಿನಕಾಯಿ ಖರೀದಿ ಮಾಡಬಹುದು. ಅಲ್ಲದೆ ವಿವಿಧ ತಳಿಗಳ ಬಗ್ಗೆ ಮಾಹಿತಿ ಪಡೆದುಕೊಳ್ಳಬಹುದಾಗಿದೆ. ಬ್ಯಾಡಗಿ ಮೆಣಸಿನಕಾಯಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಬೇಡಿಕೆಯನ್ನು ಹೊಂದಿದೆ. ಗದಗ, ಹಾವೇರಿ ಜಿಲ್ಲೆಗಳಲ್ಲಿ ಹೆಚ್ಚಾಗಿ ಮೆಣಸಿನಕಾಯಿ ಬೆಳೆಯಲಾಗುತ್ತದೆ. ರೈತರು ದೇಶದ ಬೆನ್ನೆಲುಬು, ಅವರಿಗೆ ಶಕ್ತಿ ತುಂಬಲು ಮೇಳವನ್ನು ಆಯೋಜನೆ ಮಾಡಲಾಗಿದೆ. ರೈತರ ಪರಿಸ್ಥಿತಿ ಸುಧಾರಿಸಬೇಕಿದೆ. ರೈತರು ಹೆಚ್ಚಾಗಿ ಮೇಳದಲ್ಲಿ ಪಾಲ್ಗೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷರಾದ ಎಸ್.ಪಿ. ಸಂಶಿಮಠ, ಕರ್ನಾಟಕ ರಾಜ್ಯ ಸಂಬಾರು ಪದಾರ್ಥಗಳ ಅಭಿವೃದ್ಧಿ ಮಂಡಳಿಯ ವ್ಯವಸ್ಥಾಪಕ ನಿರ್ದೇಶಕರಾದ ಬಿ.ಆರ್. ಗಿರೀಶ್, ಹೆಚ್.ಆರ್. ನಾಯ್ಕ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರಾದ ಕಾಶಿನಾಥ ಭದ್ರನ್ನವರ, ಯೋಗೇಶ ಕಿಲಾರಿ, ಆನಂದ ಸೇರಿದಂತೆ ಅಧಿಕಾರಿಗಳು, ರೈತರು, ಸಾರ್ವಜನಿಕರು ಉಪಸ್ಥಿತರಿದ್ದರು.



ಬೆಳೆಗಾರರಿಗೆ ತರಬೇತಿ ನೀಡುವ ಕೇಂದ್ರ ಕೊಚ್ಚಿನ್‌ನಲ್ಲಿದೆ. ತರಬೇತಿ ಕೇಂದ್ರ ತೆರೆಯಲು ಅಧಿಕಾರಿಗಳು ಮನವಿ ಮಾಡಿದರೆ, ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು. ಅಲ್ಲದೇ ಎಪಿಎಂಸಿ ಹತ್ತಿರದಲ್ಲಿ ರೈಲ್ ಪಾಯಿಂಟ್ ತೆರೆಯಲು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಒಪ್ಪಿಗೆಯನ್ನು ನೀಡಿವೆ. ಇದರಿಂದ ಸರಕು ಸಾಗಾಟಕ್ಕೆ ಅನುಕೂಲವಾಗಲಿದೆ. ಏಷ್ಯಾದ ಎರಡನೇ ಅತಿ ದೊಡ್ಡ ಎಪಿಎಂಸಿ ಮಾರುಕಟ್ಟೆ ಇದಾಗಿದೆ. ಯಾವುದೇ ಕಾರಣಕ್ಕೂ ಎಪಿಎಂಸಿ ಮುಚ್ಚುವಂತಿಲ್ಲ. ಎಪಿಎಂಸಿಯಲ್ಲಿ ರೈತ ಭವನ, ಕುಡಿಯುವ ನೀರು, ವಿದ್ಯುತ್ ಪೂರೈಕೆ ಸೇರಿದಂತೆ ಮೂಲ ಸೌಕರ್ಯಗಳನ್ನು ಒದಗಿಸಲಾಗುವುದು ಎಂದು ಅಬ್ಬಯ್ಯ ಪ್ರಸಾದ ಭರವಸೆ ನೀಡಿದರು.

## ಫೆ.3ರಿಂದ ಚಾಲನಾ ವೃತ್ತಿ ಪರೀಕ್ಷೆ ಪ್ರಾರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಚಾಲನಾ ವೃತ್ತಿ ಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳಿಗೆ ಚಾಲನಾ ವೃತ್ತಿ ಪರೀಕ್ಷೆಯನ್ನು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರ, ಗೋಕುಲ ರಸ್ತೆ, ಹುಬ್ಬಳ್ಳಿಯ ಚಾಲನಾ ಪಥದಲ್ಲಿ ಫೆಬ್ರವರಿ 3 ರಂದು ಪ್ರಾರಂಭಿಸಲಾಗುವುದು. ಅಭ್ಯರ್ಥಿಗಳು ಸಂಸ್ಥೆಯ ವೆಬ್‌ಸೈಟ್ ವಿಳಾಸ www.nwkrtc.karnataka.gov.in ನಲ್ಲಿ ತಮ್ಮ ಅರ್ಜಿ ಸಂಖ್ಯೆ/ಜನ್ಮ ದಿನಾಂಕವನ್ನು ನಮೂದಿಸಿ ಕರೆ ಪತ್ರವನ್ನು ಮುದ್ರಿಸಿಕೊಂಡು ನಿಗದಿತ ಸ್ಥಳ/ದಿನಾಂಕ/ಸಮಯಕ್ಕೆ ಸರಿಯಾಗಿ ಹಾಜರಾಗುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.



ಗದಗ: ನಗರಸಭೆಗೆ ನೂತನ ಪೌರಾಯುಕ್ತರಾಗಿ ಅಧಿಕಾರ ಸ್ವೀಕರಿಸಿದ ರಾಜಾರಾಮ್ ಪವಾರ್ ಅವರಿಗೆ 1ನೇ ವಾರ್ಡ್ ಸದಸ್ಯರಾದ ಶ್ರೀಮತಿ ಲಕ್ಷ್ಮಿ ಅನಿಲ್ ಕುಮಾರ್ ಸಿದ್ದಮ್ಮನಹಳ್ಳಿ, 10ನೇ ವಾರ್ಡ್‌ನ ಇಮ್ತಿಯಾಜ್ ಶಿರಹಟ್ಟಿ ಹಾಗೂ ಕಾಂಗ್ರೆಸ್ ಪಕ್ಷದ ಯುವ ಮುಖಂಡ ವಸಂತ್ ಸಿದ್ದಮ್ಮನಹಳ್ಳಿ, ಅನಿಲ್ ಕುಮಾರ್ ಸಿದ್ದಮ್ಮನಹಳ್ಳಿ ಸನ್ಮಾನಿಸಿದರು.

## ಯೋಗೋತ್ಸವ ಸ್ಪರ್ಧೆಯಲ್ಲಿ ಕೊಪ್ಪಳದ ಯೋಗಪಟುಗಳ ಸಾಧನೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯಧಾನಿಯಲ್ಲಿ ಜ.24, 25, 26 ರ ಮೂರು ದಿನಗಳ ಕಾಲ ಶಿವ ಜ್ಯೋತಿ ಯೋಗ ಕೇಂದ್ರ ಏರ್ಪಡಿಸಿದ್ದ ಯೋಗೋತ್ಸವ ಕಾರ್ಯಕ್ರಮದಲ್ಲಿ ಕೊಪ್ಪಳದ 7 ಯೋಗ ಪಟುಗಳು ಯೋಗ ಪ್ರತಿಭಾ ಪುರಸ್ಕಾರ ಪಡೆದುಕೊಂಡಿದ್ದಾರೆ. ಅಗಸ್ತ್ಯ ಅರಕೇರಿ, ಅಖಿಲೇಶ್ ಯಾದವ್, ಅರ್ಜುನ್ ಯಾದವ್, ಪ್ರಿಯಾಂಕಾ, ವೈಷ್ಣವಿ, ಸಂಜನಾ ಕ್ವಾಟಿಮಟ್, ಖುಷಿ ಎಸ್ ಜಿ, ಯೋಗ ಪ್ರತಿಭಾ ಅವಾರ್ಡ್ 2025 ಪಡೆದ ಎಲ್ಲಾ ಯೋಗ ಪಟುಗಳಿಗೆ ತರಬೇತಿದಾರರಾದ ತಿರುಮಲೇಶ್ ಯಾದವ್ ಶುಭ ಕೋರಿದ್ದಾರೆ. ಇವರ ಸಾಧನೆ ಇನ್ನೂ ಉನ್ನತ ಮಟ್ಟಕ್ಕೆ ಬೆಳೆದು ಅಂತಾರಾಷ್ಟ್ರೀಯ ಯೋಗ ಪಟುಗಳಾಗಿ ಹೊರಹೊಮ್ಮಲಿ ಎಂದು ಕ್ರೀಡಾಪಟುಗಳು ಶುಭ ಹಾರೈಸಿದ್ದಾರೆ.

## ರಾಜ್ಯ ಮಟ್ಟದ ದೇಹದಾರ್ಢ್ಯ ಸ್ಪರ್ಧೆ ನಾಳೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಅಂಬೇಡ್ಕರ್ ಭವನದಲ್ಲಿ ಫೆ.2ರಂದು ಸಾಯಂಕಾಲ 5ಕ್ಕೆ ಅವಳಿ ನಗರದ ಯುವಕರಿಂದ ಇದೇ ಮೊದಲ ಬಾರಿಗೆ ರಾಜ್ಯ ಮಟ್ಟದ ದೇಹದಾರ್ಢ್ಯ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ ಎಂದು ಮಂಜುನಾಥ ಬೆಳದಡಿ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅವಳಿ ನಗರದಲ್ಲಿ ನಡೆಯುವ ರಾಜ್ಯ ಮಟ್ಟದ ದೇಹದಾರ್ಢ್ಯ ಸ್ಪರ್ಧೆಗೆ ಮೈಸೂರು, ಮಂಗಳೂರು, ಚಿತ್ರದುರ್ಗ, ಧಾರವಾಡ, ಕಾರವಾರ ಮುಂತಾದೆಡೆಯಿಂದ ಸ್ಪರ್ಧಿಗಳು ಭಾಗವಹಿಸುತ್ತಾರೆ. ಸ್ಪರ್ಧೆಯಲ್ಲಿ ನಾಲ್ಕು ವಿಭಾಗಗಳಲ್ಲಿ ಬಹುಮಾನ ಹಾಗೂ ಪ್ರಶಸ್ತಿಪತ್ರವನ್ನು ನೀಡಲಾಗುತ್ತದೆ ಎಂದರು.

ರಾಜ್ಯ ಮಟ್ಟದ ದೇಹದಾರ್ಢ್ಯ ಸ್ಪರ್ಧೆಯನ್ನು ಭೈರನಹಟ್ಟಿ ಶಾಂತಲಿಂಗ ಸ್ವಾಮೀಜಿ ಉದ್ಘಾಟಿಸುವರು.

ಕಾಂಗ್ರೆಸ್ ಮುಖಂಡ ಕೃಷ್ಣಗೌಡ ಪಾಟೀಲ, ಪ್ರಭು ಬುರಬುರೆ, ರಾಹುಲ್ ಜಾರಕಿಹೊಳೆ ಸೇರಿದಂತೆ ಪ್ರಮುಖರು ಪಾಲ್ಗೊಳ್ಳುವರು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಸುನೀಲ ಜಡಿ, ದೇವು, ಅನಿಲ ಬೆಳವಣಿಕಿ, ಚಂದ್ರು ಕಾರ್ತಿಕ, ಪುನೀತ್ ತುಪ್ಪದ, ಶಿವಕುಮಾರ್ ಕೊಣ್ಣೂರ ಇದ್ದರು.

### ವೈದ್ಯಕೀಯ ಶಿಕ್ಷಣ ಇಲಾಖೆ, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಿಂದ ನೂತನ ಕ್ಯಾಥಲ್ಯಾಬ್ ಸೌಲಭ್ಯ

# ಹೃದ್ರೋಗ ಚಿಕಿತ್ಸಾ ಘಟಕದ ಉದ್ಘಾಟನೆ ಫೆ.3ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ವೈದ್ಯಕೀಯ ಶಿಕ್ಷಣ ಇಲಾಖೆ, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ವತಿಯಿಂದ ನೂತನ ಕ್ಯಾಥಲ್ಯಾಬ್ ಸೌಲಭ್ಯದೊಂದಿಗೆ ಸೂಪರ್ ಸ್ಪೆಷಾಲಿಟಿ ಹೃದ್ರೋಗ ಚಿಕಿತ್ಸಾ ಘಟಕದ ಉದ್ಘಾಟನಾ ಸಮಾರಂಭವು ಫೆ.3ರಂದು ಬೆಳಿಗ್ಗೆ 10 ಗಂಟೆಗೆ ಮಲ್ಲಸಮುದ್ರದ ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಆಸ್ಪತ್ರೆ ಆವರಣದಲ್ಲಿ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಚಿವ ಡಾ. ಶರಣಪ್ರಕಾಶ ಪಾಟೀಲ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ಸಂಸದ ಪಿ.ಸಿ. ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕರಾದ ಡಾ. ಚಂದ್ರು ಲಮಾಣಿ, ಅಸುಂಡಿ ಗ್ರಾ.ಪಂ ಅಧ್ಯಕ್ಷರಾದ ಅಲ್ತಾಫ್ ಕಾಗದಗಾರ ಆಗಮಿಸುವರು.

ಜಿಮ್ಸ್ ನಿರ್ದೇಶಕರಾದ ಡಾ. ಬಸವರಾಜ ಬೊಮ್ಮನಹಳ್ಳಿ, ವೈದ್ಯಕೀಯ ಅಧೀಕ್ಷಕರಾದ ಡಾ.ರೇಖಾ ಎಸ್.ಸೋನಾವನೆ, ಪ್ರಾಂಶುಪಾಲರಾದ ಡಾ. ರಾಜು ಜಿ.ಎಮ್, ಆರ್ಥಿಕ ಸಲಹೆಗಾರರಾದ ಪ್ರಶಾಂತ ಜೆ.ಸಿ, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ. ಬಿ.ಸಿ. ಕರಿಗೌಡರ ಸರ್ವರಿಗೂ ಸ್ವಾಗತ ಕೋರಿದ್ದಾರೆ.



ವಿಶೇಷ ಆಹ್ವಾನಿತರಾಗಿ ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮೊಹಮದ್ ಮೊಹಸಿನ್, ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರಾದ ಡಾ. ಬಿ.ಎಲ್. ಸುಜಾತಾ ರಾಠೋಡ ಆಗಮಿಸುವರು.

## ಸಂಪಾದಕೀಯ

# ಒಬ್ಬ ದಲಿತ ಬರೆದ ಸಂವಿಧಾನ ಸಹಿಸಿಕೊಳ್ಳುವುದು ಕಷ್ಟವಾಯಿತೆ?

ಪ್ರಯಾಗರಾಜ್ ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳದಲ್ಲಿ ಹಿಂದೂ ರಾಷ್ಟ್ರಕ್ಕೆ ಹಿಂದು ಸಂವಿಧಾನ ಬಿಡುಗಡೆಯ ಪ್ರಯತ್ನಗಳು ನಡೆದಿವೆ. ಈ ಬಗ್ಗೆ ದೇಶದಲ್ಲಿ ಪರ ವಿರೋಧ ಚರ್ಚೆಗಳು ನಡೆಯುತ್ತಿವೆ. ಆದರೆ ನನ್ನ ಜನ್ಮ ಇರುವವರೆಗೂ ಸಂವಿಧಾನವನ್ನು ಬದಲಿಸಲು ಅವಕಾಶ ಕೊಡುವುದಿಲ್ಲ ಎಂದ ಪ್ರಧಾನಿ ನರೇಂದ್ರ ಮೋದಿ ಮಾತ್ರ ಈಗ ಮೌನಕ್ಕೆ ಶರಣಾಗಿದ್ದಾರೆ.

ಅಷ್ಟಕ್ಕೂ ಈ ಸನಾತನಿಗಳಿಗೆ ಸಂವಿಧಾನ ರಚನೆಯ ಹಕ್ಕು ಕೊಟ್ಟವರು ಯಾರು? ಸಂವಿಧಾನವನ್ನ ಯಾರು ಬೇಕಾದರೂ ಯಾವಾಗ ಬೇಕಾದರೂ ರಚನೆ ಮಾಡಬಹುದೇ? ಹೀಗೆ ರಚನೆಯಾದ ಸಂವಿಧಾನ ದೇಶದಲ್ಲಿ ಕೋಮು ಸೌಹಾರ್ದತೆಗೆ ಧಕ್ಕೆ ತರುವದಾದರೆ ಅಂತಹ ಅಪರಾಧ ಎಸಗಿದವರಿಗೆ ಯಾವುದೇ ಶಿಕ್ಷೆ ಇಲ್ಲವೇ ಎನ್ನುವಂತ ಪ್ರಶ್ನೆಗಳು ಮೂಡುತ್ತವೆ.

ಹಿಂದೂ ಎಂದರೆ ಒಂದು ಜಾತಿ ಸೂಚಕ ಪದ ಎಂದು ಎಡಪಂಥೀಯ ಧೋರಣೆ ಉಳ್ಳವರು ಆರೋಪಿಸುತ್ತಾರೆ. ಅದೇ ಬಲಪಂಥೀಯರು ಹಿಂದೂ ಎಂದರೆ ಎಲ್ಲರನ್ನ ಒಳಗೊಳ್ಳುತ್ತದೆ. ದಲಿತರನ್ನು ಒಳಗೊಳ್ಳುತ್ತದೆ ಎನ್ನುತ್ತಾರೆ.

ದಲಿತರಲ್ಲಿ ಹಿಂದುಗಳು ಒಳಗೊಂಡಿದ್ದಾರೆ ಎನ್ನುವುದಾದರೆ ಅಂಬೇಡ್ಕರ್ ಸಹ ಒಬ್ಬ ಹಿಂದೂ ಎನ್ನುವುದನ್ನು ಒಪ್ಪಿಕೊಳ್ಳಬೇಕು. ಸಂವಿಧಾನ ಬರೆದ ಅಂಬೇಡ್ಕರ್ ಸಹ ಹಿಂದೂ ಎನ್ನುವುದಾದರೆ ಈಗ ಹಿಂದೂ ರಾಷ್ಟ್ರಕ್ಕೆ ಹಿಂದೂ ಸಂವಿಧಾನದ ಅಗತ್ಯವೇನಿದೆ?

ಅಂಬೇಡ್ಕರ್ ಬರೆದ ಸಂವಿಧಾನದಿಂದ ಹಿಂದುಗಳಿಗೆ ಅನ್ಯಾಯ ಆಗಿದ್ದರೆ ಅಂಬೇಡ್ಕರ್ ಬರೆದ ಸಂವಿಧಾನವನ್ನು ತಿರಸ್ಕರಿಸಿ. ಅಂಬೇಡ್ಕರ್ ಬರೆದ ಸಂವಿಧಾನ ನಮಗೆ ಬೇಕಾಗಿಲ್ಲ ಎಂದು ಖಡಖಂಡಿತವಾಗಿ ಹೇಳಿ. ಅದನ್ನು ಬಿಟ್ಟು ಶುಲ್ಕ ವಿಚಾರಗಳನ್ನ ಮುಂದಿಟ್ಟುಕೊಂಡು ಹಿಂದೂ ರಾಷ್ಟ್ರಕ್ಕೆ ಹಿಂದೂ ಸಂವಿಧಾನ ಬೇಕು ಎನ್ನುವುದು ಹಾಸ್ಯಾಸ್ಪದ ಎನಿಸಿಕೊಳ್ಳುತ್ತದೆ.

ಆದರೆ ಈ ಹಾಸ್ಯಸ್ಪದ ದೇಶದ ಸಾರ್ವಭೌಮತೆಗೆ ಧಕ್ಕೆ ತರುತ್ತದೆ. ಇಂತಹ ಪ್ರಯತ್ನಗಳಿಗೆ ಸರ್ಕಾರ ಕಡಿವಾಣ ಹಾಕದಿದ್ದರೆ, ಅದೇ ಸಂವಿಧಾನದ ಅಡಿಯಲ್ಲಿಯೇ ಜನ ತಕ್ಕ ಉತ್ತರ ಕೊಡುತ್ತಾರೆ ಎನ್ನುವುದನ್ನು ಸರಕಾರಗಳು ಅರ್ಥ ಮಾಡಿಕೊಳ್ಳಬೇಕು.

# ಛತ್ತೀಸ್‌ಗಢ | 32 ಲಕ್ಷ ಬಹುಮಾನ ಘೋಷಣೆಯಾಗಿದ್ದ 7 ಮಂದಿ ನಕ್ಸಲರು ಶರಣು

■ ವಿಜಯಸಾಕ್ಷಿ ಸುದ್ದಿ, ಛತ್ತೀಸ್‌ಗಢ

ಛತ್ತೀಸ್‌ಗಢದ ಕಂಕೇರ್ ಜಿಲ್ಲೆಯಲ್ಲಿ ಭದ್ರತಾ ಪಡೆಗಳ ಮೇಲಿನ ಹಲವಾರು ದಾಳಿಗಳಲ್ಲಿ ಭಾಗಿಯಾಗಿರುವ ಆರೋಪ ಹೊತ್ತಿರುವ ಮತ್ತು 32 ಲಕ್ಷ ರೂಪಾಯಿಗಳ ಸಾಮೂಹಿಕ ನಗದು ಬಹುಮಾನ ಘೋಷಣೆಯಾಗಿದ್ದ ಮೂವರು ಮಹಿಳೆಯರು ಸೇರಿದಂತೆ ಏಳು ಮಂದಿ ನಕ್ಸಲರು ಶುಕ್ರವಾರ (ಜ.31) ಶರಣಾಗಿದ್ದಾರೆ ಎಂದು ವರದಿಯಾಗಿದೆ. ಹಿರಿಯ ನಕ್ಸಲರ "ಟೊಳ್ಳು" ಮತ್ತು "ಅಮಾನವೀಯ" ಮಾವೋವಾದಿ ಸಿದ್ಧಾಂತ ಮತ್ತು ಬುಡಕಟ್ಟು ಜನಾಂಗದವರ ಶೋಷಣೆಯಿಂದ ನಿರಾಶೆಗೊಂಡ ಕಾರಣ, 7 ಮಂದಿ ನಕ್ಸಲರು ಹಿರಿಯ ಪೊಲೀಸ್ ಮತ್ತು ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಅಧಿಕಾರಿಗಳ ಮುಂದೆ ಶರಣಾಗಿದ್ದಾರೆ ಎಂದು ಕಂಕೇರ್ ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಇಂದಿರಾ ಕಲ್ಯಾಣ್ ಎಲೆಸೆಲಾ ಹೇಳಿದ್ದಾಗಿ ಡೆಕ್ಕನ್ ಹೆರಾಲ್ಡ್ ವರದಿ ಮಾಡಿದೆ.

ಶರಣಾದವರಲ್ಲಿ ಮಮತಾ ಅಲಿಯಾಸ್ ಶಾಂತಾ ಅಲಿಯಾಸ್ ವಾಸಣ್ಣ ಬತ್ತುಳಾಯಿ (60), ದಿನೇಶ್ ಮತ್ತಾಮಿ (20) ಮತ್ತು ಆಯ್ತು ರಾಮ್ ಪೋತಾಯಿ (27) ಸೇರಿದ್ದಾರೆ.



ಗದಗ: ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಹುತಾತ್ಮ ದಿನದ ಅಂಗವಾಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಎರಡು ನಿಮಿಷಗಳ ಮೌನಾಚರಣೆ ಆಚರಿಸುವ ಮೂಲಕ ಸರ್ವೋದಯ ದಿನ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ. ಸೇರಿದಂತೆ ವಿವಿಧ ಇಲಾಖೆ ಅಧಿಕಾರಿ, ಸಿಬ್ಬಂದಿಗಳು ಮೌನಾಚರಣೆ ಆಚರಿಸುವ ಮೂಲಕ ಗೌರವ ಸಮರ್ಪಿಸಿದರು.

# ಮೇಲುಸ್ತುವಾರಿಯಾಗಿ ರಮೇಶ ಬಗಲಿ ನೇಮಕ

■ ವಿಜಯಸಾಕ್ಷಿ ಸುದ್ದಿ, ಧಾರವಾಡ



ಕರ್ನಾಟಕ ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳು ಸಾಲ ವಸೂಲಾತಿ ನೆಪದಲ್ಲಿ ಸಾಲಗಾರರಿಗೆ ಕಿರುಕುಳ ನೀಡುತ್ತಿರುವ ಪ್ರಕರಣಗಳು ಹೆಚ್ಚುತ್ತಿರುವದರಿಂದ ಮುಖ್ಯಮಂತ್ರಿಗಳ ಸೂಚನೆಯಂತೆ ಧಾರವಾಡ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಹಾಯವಾಣಿ ಕೇಂದ್ರವನ್ನು ಸ್ಥಾಪಿಸಲಾಗಿದೆ. ನೊಂದವರು ದೂರವಾಣಿ ಸಂಖ್ಯೆ 0836-2445508 ಅಥವಾ ಟೋಲ್ ಫ್ರೀ ನಂ: 1077ಕ್ಕೆ ಕರೆ ಮಾಡಿ ಮಾಹಿತಿ ನೀಡಬಹುದು. ಮಾಹಿತಿದಾರರ ವಿವರಗಳನ್ನು ಗೌಪ್ಯವಾಗಿ ಇಡಲಾಗುವುದೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮೈಕ್ರೋ ಫೈನಾನ್ಸ್ ಕಂಪನಿಗಳಿಂದ ಆಗುತ್ತಿರುವ ಕಿರುಕುಳಕ್ಕೆ ಸಂಬಂಧಿಸಿದಂತೆ ಸಹಾಯವಾಣಿ ಕೇಂದ್ರಗಳಲ್ಲಿ ಕರೆಗಳನ್ನು ಸ್ವೀಕರಿಸಲು ವಾರದ 7 ದಿನಗಳಲ್ಲಿ ಹಗಲು-ರಾತ್ರಿ ಪಾಳಿಯಲ್ಲಿ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಾರೆ.

ಸಿಬ್ಬಂದಿಯವರು ನಿಗದಿತ ಸಮಯದಲ್ಲಿ ಸಹಾಯವಾಣಿ ಕೇಂದ್ರದಲ್ಲಿ ಹಾಜರಿದ್ದು, ದೂರವಾಣಿಯ ಮೂಲಕ ಸ್ವೀಕರಿಸುವ ಎಲ್ಲ ದೂರು ಮತ್ತು ಮಾಹಿತಿಗಳನ್ನು ಕಾರ್ಯಾಲಯದಲ್ಲಿ ನಿರ್ವಹಣೆ ಮಾಡಿದ ವಹಿಯಲ್ಲಿ ದಾಖಲಿಸಿ, ದೂರಿನ ಸಮಸ್ಯೆ ಅಂಶಗಳ ಬಗ್ಗೆ ಆಯಾ ತಾಲೂಕಿನ ತಹಸೀಲ್ದಾರರಿಗೆ ಮತ್ತು ಪೊಲೀಸ್ ಇಲಾಖೆಗೆ ತಕ್ಷಣ ಮಾಹಿತಿ ನೀಡುವರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿನ ಈ ಸಹಾಯವಾಣಿ ಕೇಂದ್ರ ಮೇಲುಸ್ತುವಾರಿ ಅಧಿಕಾರಿಯನ್ನಾಗಿ ಧಾರವಾಡ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕ ರಮೇಶ ಬಗಲಿ (ದೂರವಾಣಿ ಸಂಖ್ಯೆ: 9148431516) ಅವರನ್ನು ನೇಮಿಸಿ, ಆದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

## ಫೆ.1, ವೀರ ಶರಣ-ಮಡಿವಾಳ ಮಾಚಿದೇವ ಅವರ ಜಯಂತಿ ನಿಮಿತ್ತ ಸಾಂದರ್ಭಿಕ ಲೇಖನ

# ಶರಣ ಕಿರಣ-ಮಡಿವಾಳ ಮಾಚಿದೇವ


ಎನ್ನ ಕಾಯವ ಶುದ್ಧವ ಮಾಡಿದಾತ ಮಡಿವಾಳ ।
ಎನ್ನ ಮನವ ನಿರ್ಮಲವ ಮಾಡಿದಾತ ಮಡಿವಾಳ
ಎನ್ನಂತರಂಗವ ಬೆಳಗಿದಾತ ಮಡಿವಾಳ ।
ಎನ್ನ ಬಹಿರಂಗವ ಬಿಡಿಸಿದಾತ ಮಡಿವಾಳ ಕೂಡಲಸಂಗಮದೇವಾ
ಎನ್ನ ನಿಮಗೆ ಯೋಗ್ಯನ ಮಾಡಿದಾತ ಮಡಿವಾಳ॥

ಎಂದು ಮಡಿವಾಳ ಮಾಚಿದೇವನನ್ನು, ಬಸವಣ್ಣನವರು ತಮ್ಮ ವಚನದಲ್ಲಿ ಹೊಗಳಿದ್ದನ್ನು ಈ ವಚನದಲ್ಲಿ ಕಾಣುತ್ತೇವೆ.

ನಾನು ಹೇಳಹೊರಟಿರುವುದು ಶ್ರೇಷ್ಠ ಶರಣ, ಗುಣಾಚಾರ ಸಂಪನ್ನ, ಶಿವನ ಪರಮ ಭಕ್ತ, ಉದಯಿಸಿದ ಶರಣ ಕಿರಣ, ಅವತಾರ ಪುರುಷ ಮಡಿವಾಳ ಮಾಚಿದೇವ ಅವರ ಬಗ್ಗೆ. ಫೆ.1ರಂದು ಶ್ರೀಗುರು ಮಡಿವಾಳ ಮಾಚಿದೇವ ಅವರ ಜಯಂತಿಯನ್ನು ಆಚರಿಸಲಾಗುತ್ತಿದೆ.

ಸಮಾಜಕ್ಕೆ ನ್ಯಾಯ ಒದಗಿಸುವ ಸಲುವಾಗಿ ಸರ್ವರಿಗೂ ಸಮಪಾಲು ಹಾಗೂ ಸಮಬಾಳನ್ನು ಅನುಷ್ಠಾನಗೊಳಿಸಿದ ಮಹನೀಯರಲ್ಲಿ ಮಡಿವಾಳ ಮಾಚಿದೇವರು ಅಗ್ರಗಣ್ಯರು. ವಚನ ಸಾಹಿತ್ಯ ರಕ್ಷಣೆಯ ದಂಡನಾಯಕರೆಂದೇ ಮಾಚಿದೇವರನ್ನು ಕರೆಯುತ್ತಾರೆ. ಕಲ್ಯಾಣ ಕ್ರಾಂತಿಯ ಸಮಯದಲ್ಲಿ ಮಾಚಿದೇವರು ಹೊತ್ತ ಜವಾಬ್ದಾರಿ ಅನುಪಮವಾದದ್ದು. ಶರಣ ಸಮೂಹವನ್ನು ರಕ್ಷಿಸಿ, ವಚನ ಸಾಹಿತ್ಯವನ್ನು ಉಳವಿಗೆ ತಲುಪಿಸಿದ ಮಹಾನ್ ದಂಡನಾಯಕ ನಮ್ಮ ಮಾಚಿದೇವರು.

ಮಾಚಿದೇವ ಅವರು ವಿಜಯಪುರ ಜಿಲ್ಲೆಯ ಸಿಂಧಗಿ ತಾಲೂಕಿನ 'ದೇವರ ಹಿಪ್ಪರಗಿಯಲ್ಲಿ' ಪರುವತಯ್ಯ-ಸುಜ್ಞಾನವ್ವ ದಂಪತಿಗಳ ಪುತ್ರ ರತ್ನನಾಗಿ ಉದಯಿಸಿದ ಶರಣ ಕಿರಣ. ಮಡಿವಾಳ ಮಾಚಿದೇವರು ಜನಿಸಿದ್ದು ಕ್ರಿ.ಶ 1120-1130ರ ನಡುವೆ ಎಂದು ಹೇಳಲಾಗುತ್ತದೆ. ಇವರ ಕಸುಬು-ಬಟ್ಟೆಗಳ ಕೊಳೆಯನ್ನು ತೆಗೆದು ಮಡಿಮಾಡುವುದು/ಬಟ್ಟೆ ಒಗೆಯುವುದು.



12ನೇ ಶತಮಾನದಲ್ಲಿ ದುರ್ಬಲರ ಶೋಷಣೆ, ಜಾತೀಯತೆ, ಮೇಲು-ಕೀಳು ತಾರತಮ್ಯ, ಅಸ್ಪೃಶ್ಯತೆ, ಮೂಢ ನಂಬಿಕೆಗಳ ಸೃಷ್ಟಿ, ಶಿಕ್ಷಣದಲ್ಲಿ ಅವಕಾಶ ವಂಚನೆ ಹೀಗೆ ಅನೇಕ ಸಾಮಾಜಿಕ ಅಸಮಾನತೆಯಿಂದ ಜನರು ತುಳಿತಕ್ಕೆ ಒಳಗಾಗಿದ್ದರು. ಇವುಗಳೆಲ್ಲವುಗಳಿಂದ ಮಹಿಳೆಯರು, ವೃತ್ತಿ ನಿರತ ಶ್ರಮಜೀವಿಗಳು, ಬಡವರು, ದೀನ ದಲಿತರು ನಿರಾಶೆ-ಹತಾಶೆಗೊಂಡು ಅಸಹನೀಯ ಬದುಕಿಗೆ ತುತ್ತಾಗಿದ್ದರು. ಇಂತಹ ಸಂದರ್ಭದಲ್ಲಿ ಧರೆಗಿಳಿದು ಬಂದ ಮಾಚಿದೇವರನ್ನು 'ಅವತಾರ ಪುರುಷ' ಎಂದರೆ ತಪ್ಪಿಲ್ಲ.

ಮಾಚಿದೇವನು, ದಕ್ಷನನ್ನು ಸಂಹಾರ ಮಾಡಿ ಅತಿ ಉತ್ಸಾಹದಿಂದ ಶಿವನನ್ನು ಕಾಣಲು ವೀರಭದ್ರ ಶಿವನ ಸಭೆಯೊಳಗೆ ನಡೆದು ಬರುತ್ತಾನೆ. ಸಭೆಯಲ್ಲಿರುವ ಶಿವ ಭಕ್ತನಿಗೆ ಈತನ ಉತ್ತರೀಯ ಸೆರಗು ತಾಕುತ್ತದೆ. ವಿಜಯದ ಉದ್ವೇಗದಲ್ಲಿ ಆದ ಆ ತಪ್ಪಿಗೆ, ಭೂಲೋಕದಲ್ಲಿ ಮಡಿವಾಳನಾಗಿ ಜನಿಸಿ ಶರಣರ ವಸ್ತ್ರಗಳನ್ನು ಮಡಿ ಮಾಡುವ ಕಾಯಕ ಪೂರೈಸಿ ದೋಷ ಮುಕ್ತನಾಗಿ ಬರುವಂತೆ ಶಿವನ ಆದೇಶವಾಗುತ್ತದೆ. ಮಾಚಿದೇವರನ್ನು ವೀರ ಭದ್ರನ 'ದೇವಾಂಶ ಸಂಭೂತ ಅವತಾರ ಪುರುಷ'ನೆಂದು ನಿರೂಪಿಸುವುದು ಸಾಮಾನ್ಯ ರೂಢಿಯಾಗಿದೆ.

ಸರ್ವರಿಗೂ ಸಮಾನ ಅವಕಾಶ ನೀಡಬೇಕೆನ್ನುವುದು ಇವರ ಆಶಯವಾಗಿತ್ತು. ಎಲ್ಲರಿಗೂ ಸಮಪಾಲು ಒದಗಿಸಲು ಬಸವ-ಮಾಚಿದೇವಾದಿ ಶರಣರು ಸಾಮಾಜಿಕ ಕ್ರಾಂತಿಯನ್ನೇ ಕೈಗೊಂಡರು. ಶರಣರ ಅಗ್ರಗಣ್ಯ ಬಳಗದಲ್ಲಿ ಮಡಿವಾಳ ಮಾಚಿದೇವ ಅತ್ಯಂತ ಪ್ರಕಾಶಮಾನವಾಗಿ ಕಂಡುಬರುವರು.

ಮಾಚಿದೇವರು, ಬಸವಾದಿ ಶರಣರು ಆಚರಿಸಿ, ಬೋಧಿಸಿದ ಆಚಾರಗಳಲ್ಲಿ ಒಂದಾದ ಗಣಾಚಾರವೆಂಬ ಆಚಾರ ಪಾಲಿಸಿದವರು. ಆಚಾರವೆಂದರೆ ಸಮಾಜದೊಂದಿಗೆ ನಾವು ನಡೆದುಕೊಳ್ಳುವ ರೀತಿ-ನೀತಿ ಎಂದು ತಿಳಿಸಿಕೊಟ್ಟವರು. ಗಣ ಎಂದರೆ ಸಮೂಹ ಅಥವಾ ಸಮಾಜ ಎಂಬರ್ಥ. ವ್ಯಕ್ತಿಯೊಬ್ಬ ತಾನು ಜೀವಿಸುತ್ತಿರುವ ಸಮಾಜದ ಶ್ರೇಯೋಭಿವೃದ್ಧಿಗಾಗಿ ಸತ್ಯಶುದ್ಧ ಕಾಯಕದ ಮೂಲಕ ದುಡಿದು ದಾಸೋಹ ಮಾಡುವುದು ಸದಾಚಾರವಾದರೆ, ಸಮಾಜಕ್ಕೆ ಕೇಡುಕುಂಟುಮಾಡುವ, ಕಳಂಕ ತರುವ, ಸಮಾಜದ ಮೇಲೆ ದುಷ್ಪರಿಣಾಮ ಬೀರುವ ದುಷ್ಟಶಕ್ತಿಗಳ ವಿರುದ್ಧ ನೈತಿಕವಾಗಿ ಹೋರಾಡುವುದು ಮಡಿವಾಳ ಮಾಚಿದೇವ ಅವರ ನಿಷ್ಠೆಯಾಗಿತ್ತು.

ಒಂದು ಪ್ರಾಣಿಯನ್ನೇ ಆಗಲಿ, ಮಗುವನ್ನೇ ಆಗಲೀ ಪ್ರೋತ್ಸಾಹಿಸಿದಾಗ ಅಥವಾ ಕೆಣಕಿದಾಗ ಅದಕ್ಕೆ ತಕ್ಕ ಪ್ರತಿಕ್ರಿಯೆ ನೀಡುವುದು ಅದರ ಸಹಜ ಸ್ವಭಾವ. ಸರಳವಾಗಿ ಹೇಳಬೇಕೆಂದರೆ ಗಣಾಚಾರವು ಪ್ರತಿಯೊಂದು ಜೀವಿಯಲ್ಲಿಯೂ ಯಾವುದೇ ಬಾಹ್ಯ ಕ್ರಿಯೆಗೆ ಇರಬಹುದಾದ ಅಥವಾ ಇರಲೇಬೇಕಾದ ಸ್ವಾಭಾವಿಕ ಪ್ರತಿಕ್ರಿಯೆ. ಇಂತಹ ಗುಣಗಳನ್ನು ಹೊಂದಿರುವ ಮಾಚಿದೇವರು ನಿಜವಾಗಲೂ ಗಣಾಚಾರ ಸಂಪನ್ನರು ಎಂದು ಅವರ ಸಮಕಾಲೀನ ಶರಣರು ಬಹಳವಾಗಿ ಅವರನ್ನು ಹೊಗಳುತ್ತಾರೆ.

ಒಟ್ಟಾರೆಯಾಗಿ ಮಾಚಿದೇವರು, ಬ್ರಹ್ಮ ಪದವಿ, ವಿಷ್ಣು ಪದವಿ, ರುದ್ರ ಪದವಿ, ಇಂದ್ರ ಪದವಿ ಇನ್ನಾವುದೇ ಪದವಿಗಳು ಬೇಡ. ಇವೆಲ್ಲವಕ್ಕೂ ಒಡೆಯನಾದ ಶಿವನ ಶರಣರ ಮನೆಯಲ್ಲಿ ಸೇವಕನಾಗಿ ಹುಟ್ಟುವ ಪದವಿ ಕರುಣಿಸು ಕಲಿದೇವಾ ಎಂದಿದ್ದಾರೆ. ಉನ್ನತ ಸೇವಾ ಮನೋಭಾವವಿರುವನೇ ದೊಡ್ಡವನು. ನಮ್ಮಯ ನಡುವೆ ಸ್ವಾರ್ಥ, ಪ್ರತಿಷ್ಠೆಗಳು ಬೇಡವೆಂದಿದ್ದಾರೆ. ಇದು ಅವರ ಮಹಾನ್ ವ್ಯಕ್ತಿತ್ವದ ಘನತೆ-ಗೌರವಗಳಿಗೆ ಹಿಡಿದ ಕನ್ನಡಿಯಾಗಿದೆ.



ವಚನ ಸಾಹಿತ್ಯ ರಕ್ಷಕ, ಅಚಲ ಕಾಯಕ ನಿಷ್ಠ, ಕಾಯಕವೇ ಭಕ್ತಿ, ಜೀವನದುಸಿರು ಎಂದು ನಂಬಿದ್ದ ಶ್ರೀ ಮಡಿವಾಳ ಮಾಚಿದೇವ ಜಯಂತಿಯಂದು ಪ್ರಣಾಮಗಳು.

**- ಬಸವರಾಜ ಎಮ್.ಯರಗುಪ್ಪಿ. ಲಕ್ಷ್ಮೇಶ್ವರ.**

## ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಎಸ್.ಎಸ್. ಪಟ್ಟಣಶೆಟ್ಟರ್

# ವಿದ್ಯಾರ್ಥಿಗಳು ಜ್ಞಾನ ಸಂಪಾದನೆಗೆ ಶ್ರಮಿಸಿ

■ ವಿಜಯಸಾಕ್ಷಿ ಸುದ್ದಿ, ಡಂಬಳ

ವಿದ್ಯಾರ್ಥಿಗಳು ಸಮಯವನ್ನು ವ್ಯರ್ಥಮಾಡದೆ ಜ್ಞಾನ ಸಂಪಾದನೆಗೆ ಶ್ರಮಿಸಿದಷ್ಟೂ ವ್ಯಕ್ತಿತ್ವ ವಿಕಸನಗೊಳ್ಳುತ್ತದೆ. ಉಜ್ವಲ ಭವಿಷ್ಯ ಹೊಂದಲು ನಾಂದಿಯಾಗುತ್ತದೆ ಎಂದು ಜಗದ್ಗುರು ತೋಂಟದಾರ್ಯ ಮಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ್ ಹೇಳಿದರು.

ಡಂಬಳ ಗ್ರಾಮದ ಜಗದ್ಗುರು ತೋಂಟದಾರ್ಯ ಸಂಯುಕ್ತ ಪದವಿಪೂರ್ವ ಕಾಲೇಜು, ಜಗದ್ಗುರು ತೋಂಟದಾರ್ಯ ಬಾಲಕರ ಪ್ರೌಢಶಾಲೆ, ಜಗದ್ಗುರು ತೋಂಟದಾರ್ಯ ವಿದ್ಯಾಪೀಠ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿಗಳ ದ್ವಿತೀಯ ಪಿಯುಸಿ, ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ಉದ್ಘಾಟಿಸಿ ಮತ್ತು ಸೇವಾ ನಿವೃತ್ತಿ ಹೊಂದಿದ ದೈಹಿಕ ಶಿಕ್ಷಕ ಬಿ.ಎಸ್. ಕಣವಿ ಅವರನ್ನು ಸನ್ಮಾನಿಸಿ ಅವರು ಮಾತನಾಡಿದರು.




ಸಮಾಜ ಸೇವಕ ಗೋಣಿಬಸಪ್ಪ ಕೊರ್ಲಹಳ್ಳಿ ಮಾತನಾಡಿ, ಮೌಢ್ಯ, ಕಂದಾಚಾರ, ಬಡತನ ನಿರ್ಮೂಲನೆಗೆ ಏಕೈಕ ಶಕ್ತಿ ಎಂದರೆ ಶಿಕ್ಷಣ ಮಾತ್ರ. ಅನಿಷ್ಟ ಪದ್ಧತಿಗಳನ್ನು ಹೋಗಲಾಡಿಸಬಹುದು ಎನ್ನುವ ದೂರ ದೃಷ್ಟಿಯಿಂದ ಗ್ರಾಮೀಣ ಭಾಗದಲ್ಲಿ ನೂರಾರು ಸಂಸ್ಥೆಗಳನ್ನು ಕಟ್ಟಿ ಗ್ರಾಮೀಣ ವಿದ್ಯಾರ್ಥಿಗಳ ಬದುಕು ಕಟ್ಟಿದ ಶ್ರೇಯಸ್ಸು ಲಿಂ. ಡಾ. ತೋಂಟದ ಸಿದ್ಧಲಿಂಗ ಶ್ರೀಗಳಿಗೆ ಸಲ್ಲುತ್ತದೆ. ಎಲ್ಲಾ ವಿದ್ಯಾರ್ಥಿಗಳಲ್ಲಿಯೂ ಪ್ರತಿಭೆ ಇರುತ್ತದೆ. ಕಡು ಬಡತನದ ಮಧ್ಯೆಯೇ ಕಷ್ಟಪಟ್ಟು ತಂದೆ-ತಾಯಂದಿರು ಮಕ್ಕಳ ಉತ್ತಮ ಸಂಸ್ಕಾರದ ಜೊತೆಗೆ ಶಿಕ್ಷಣಕ್ಕೆ ಒತ್ತು ಕೊಡಬೇಕು ಎಂದು ಹೇಳಿದರು.

ಂಪ್ರಾಚಾರ್ಯ ಎಸ್.ಎನ್. ಕಲ್ಲಿಗನೂರ, ಎಮ್.ಬಿ. ಮಡಿವಾಳರ ಮಾತನಾಡಿ, ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿ ಜೀವನದ ಮುಖ್ಯ ಘಟ್ಟವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಭವಿಷ್ಯ ಉತ್ತಮವಾಗಿಸಿಕೊಳ್ಳಲು ನಿರಂತರವಾಗಿ ಶ್ರಮಿಸಿ ಉತ್ತಮ ಫಲಿತಾಂಶ ನಿಮ್ಮದಾಗಿಸಿಕೊಳ್ಳಿ ಎಂದರು.

ಕಾರ್ಯಕ್ರಮದಲ್ಲಿ ಪತ್ರಕರ್ತ ರಿಯಾಜಅಹ್ಮದ ದೊಡ್ಡಮನಿ, ಲಕ್ಷ್ಮಣ ದೊಡ್ಡಮನಿ, ಬಾಲಕರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯೆ ಸಂಜೋತಾ ಸಂಕಣ್ಣವರ, ಜ್ಯೋತಿ ಶಿರೂರ, ಮೃತ್ಯುಂಜಯ ಹಿರೇಮಠ, ಎ.ವಿ. ಹಿರೇಮಠ, ಎ.ಬಿ. ಬೇವಿನಕಟ್ಟಿ, ವಿ.ಎಸ್. ಹಿರೇಮಠ, ಎಸ್.ಎಮ್. ಹಂಚಿನಾಳ, ಡಿ.ಎಮ್. ರಾಠೋಡ, ಬಿ.ಎಸ್. ಕಣವಿ, ಬಿ.ಎನ್. ಅಂಗಡಿ, ಪಿ.ಕೆ.ತಳವಾರ, ಎಮ್.ಕೆ. ಹರಿಜನ್, ಆರ್.ಎಸ್. ಪಾಟೀಲ, ಶ್ವೇತಾ, ರಾಮಜಿ, ಸುನೀಲ್, ಮಾರುತಿ, ಈರಣ್ಣ ವಿಭೂತಿ, ದೇವಮ್ಮಾ ಕರದಾನಿ, ಶಿಕ್ಷಕ ವೃಂದದವರು, ವಿದ್ಯಾರ್ಥಿಗಳು ಇದ್ದರು.

## ಧರ್ಮ ಜಾಗೃತಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಧರ್ಮದಿಂದ ವಿಮುಖನಾದರೆ ಅವನತಿ ನಿಶ್ಚಿತ

■ ವಿಜಯಸಾಕ್ಷಿ ಸುದ್ದಿ, ಕಲಘಟಗಿ

ಪ್ರಕೃತಿ ಮಾನವನನ್ನು ಸೃಷ್ಟಿಸಿದರೆ, ಸಂಸ್ಕಾರ ದೇವ ಮಾನವರನ್ನು ಸೃಷ್ಟಿಸುತ್ತದೆ. ಸಾಮಾಜಿಕ ಸಂಪ್ರದಾಯಗಳು ಬದಲಾಗಬಹುದು. ಆದರೆ ನೈತಿಕ ನಿಯಮಗಳು ಶಾಶ್ವತವಾಗಿವೆ. ಮನುಷ್ಯ ಧರ್ಮ ಸಂಸ್ಕೃತಿಯಿಂದ ವಿಮುಖನಾದರೆ ಅವನತಿ ನಿಶ್ಚಿತವೆಂಬುದನ್ನು ಯಾರೂ ಮರೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಸುಕ್ಷೇತ್ರ ಯಲವಧಾಳ ಮತ್ತು ತಾವರಗೇರಿ ಗ್ರಾಮದಲ್ಲಿ ಶ್ರೀ ಗುರು ಚನ್ನವೀರೇಶ್ವರಸ್ವಾಮಿ ಮಠದ ಉದ್ಘಾಟನೆ, ಮೂರ್ತಿ ಪ್ರತಿಷ್ಠಾಪನೆ, ಗೋಪುರ ಕಳಸಾರೋಹಣ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ದೇವಸ್ಥಾನಗಳು ನಮ್ಮ ಸಂಸ್ಕೃತಿಯ ಪ್ರತೀಕವಾಗಿವೆ. ಜನರಲ್ಲಿ ಜಾಗೃತಿ ಸಂಸ್ಕಾರ ಮತ್ತು ರಾಷ್ಟ್ರೀಯ ಭಾವನೆಗಳನ್ನು ಬೆಳೆಸುವ ಸಾಮರಸ್ಯ ಕೇಂದ್ರಗಳಾಗಿವೆ. ವಿಚಾರ ವಿಮರ್ಶೆಗಳು ನಮ್ಮ ಸಂಸ್ಕೃತಿಯ ಮೇಲೆ ಹೊಸ ಬೆಳಕು ಮೂಡಿಸಬೇಕೇ ಹೊರತು ಜನರನ್ನು ನಾಸ್ತಿಕರನ್ನಾಗಿ ಮಾಡಬಾರದು. ಮಾನವೀಯ ಸಂಬಂಧಗಳು ಶಿಥಿಲಗೊಳ್ಳುತ್ತಿರುವ ಇಂದಿನ ದಿನಗಳಲ್ಲಿ ಭಾವನೆಗಳನ್ನು ಬೆಸೆಯುವ ಕೆಲಸವಾಗಬೇಕಾಗಿದೆ. ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಅದರೊಂದಿಗೆ ಒಂದಿಷ್ಟಾದರೂ ಶಿವಜ್ಞಾನದ ಅರಿವು ಇರಬೇಕಾಗುತ್ತದೆ. ಪ್ರತಿಯೊಬ್ಬರಲ್ಲಿ ಸಮಯ ಪಾಲನೆ, ನಿಯಮ ಪಾಲನೆ ಮತ್ತು ಸಂಯಮ ಬೆಳೆದುಕೊಂಡು ಬರುವ ಅವಶ್ಯಕತೆಯನ್ನು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದಲ್ಲಿ ನಿರೂಪಿಸಿದ್ದಾರೆ. ಸಂತೃಪ್ತಿ-ಸಮೃದ್ಧಿಗಾಗಿ ಧರ್ಮಾಚರಣೆ ಮಾಡಬೇಕೆಂದು ಶ್ರೀ ರಂಭಾಪುರಿ ಜಗದ್ಗುರುಗಳು ನುಡಿದರು.




ನೇತೃತ್ವ ವಹಿಸಿದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರು ಮಾತನಾಡಿ, ಮಾತಿಗೆ ತೂಕ ಬರುವುದು ಸತ್ಯದಿಂದಲ್ಲದೇ ಅಸತ್ಯದಿಂದಲ್ಲ. ಮಾತಿಗೆ ಮೌಲ್ಯ ಬರಬೇಕಾದರೆ ಆಡುವ ಮಾತಿನಲ್ಲಿ ಹಿತಮಿತ ಇರಬೇಕು. ಮಾನವನ ಉಸಿರಾಟಕ್ಕೆ ಗಾಳಿ ಎಷ್ಟು ಮುಖ್ಯವೋ ಜೀವನದ ಉಜ್ವಲ ಭವಿಷ್ಯಕ್ಕೆ ಮಹಾತ್ಮರ ಸಂದೇಶಗಳೂ ಅಷ್ಟೇ ಮುಖ್ಯವಾಗಿವೆ ಎಂದರು.

ಎಂ.ಚಂದರಗಿ ಹಿರೇಮಠದ ವೀರಭದ್ರ ಶಿವಾಚಾರ್ಯರು ಪ್ರಾಸ್ತಾವಿಕವಾಗಿ ಮಾತನಾಡಿ, ಮಾನವನ ಜೀವನದ ಉನ್ನತಿ ಮತ್ತು ಶ್ರೇಯಸ್ಸಿಗೆ ಧರ್ಮವೇ ಮೂಲ. ಶ್ರೀ ಜಗದ್ಗುರು ರೇಣುಕಾಚಾರ್ಯರು ಮಾನವ ಜೀವನದ ವಿಕಾಸಕ್ಕಾಗಿ ಬೋಧಿಸಿದ ತತ್ವ ಸಿದ್ಧಾಂತಗಳು ಸಕಲರ ಬಾಳಿನಲ್ಲಿ ಬೆಳಕನ್ನು ತೋರಿವೆ ಎಂದರು.

ಸಮಾರಂಭದಲ್ಲಿ ಮಾಜಿ ಶಾಸಕ ಎಸ್.ಐ. ಚಿಕ್ಕನಗೌಡ್ರ, ಬಸಯ್ಯ ಹಿರೇಮಠ, ಚರಂತಯ್ಯ ಹಿರೇಮಠ, ಗ್ರಾ.ಪಂ ಅಧ್ಯಕ್ಷೆ ಅನಸವ್ವ ಕಾಮಧೇನು, ಶ್ರೀ ಚನ್ನವೀರೇಶ್ವರ ಟ್ರಸ್ಟ್ ಕಮಿಟಿ ಸದಸ್ಯರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು.

ಅಧ್ಯಕ್ಷತೆ ವಹಿಸಿದ ಹನ್ನೆರಡುಮಠದ ರೇವಣಸಿದ್ಧ ಶಿವಾಚಾರ್ಯರು ಮಾತನಾಡಿ, ಮನುಷ್ಯ ಹಣ ಕಳೆದುಕೊಂಡು ಬದುಕಬಹುದು. ಆದರೆ ಗುಣ ಕಳೆದುಕೊಂಡು ಬಾಳಬಾರದು. ಅಂತರಂಗ ಮತ್ತು ಬಹಿರಂಗ ಶುದ್ಧಿಗೊಳಿಸುವ ಶಕ್ತಿ ಶ್ರೀ ಗುರುವಿಗೆ ಮಾತ್ರ ಇದೆ. ಗುರು ಬೋಧಾಮೃತವನ್ನರಿತು ಬಾಳನ್ನು ಕಟ್ಟಿಕೊಳ್ಳುವುದನ್ನು ಯಾರೂ ಮರೆಯಬಾರದೆಂದರು.

ಶಿರಕೋಳದ ಗುರುಸಿದ್ಧೇಶ್ವರ ಶ್ರೀಗಳು, ಸುಳ್ಳದ ಶಿವಸಿದ್ಧರಾಮೇಶ್ವರ ಶ್ರೀಗಳು, ಮುತ್ನಾಳ ಶಿವಾನಂದ ಶ್ರೀಗಳು, ಬ್ಯಾಹಟ್ಟಿ ಮರುಳಸಿದ್ಧ ಶ್ರೀಗಳು, ಮೊರಬ ಮಹೇಶ್ವರ ಶ್ರೀಗಳು, ಕಲಘಟಗಿ ಅಭಿನವ ಮಡಿವಾಳ ಶ್ರೀಗಳು, ಬೆಲವಂತರ ರೇವಣಸಿದ್ಧಯ್ಯ ಸ್ವಾಮಿಗಳು, ಸಿದ್ಧಾರೂಢ ಮಠದ ನಿರ್ಗುಣಾನಂದ ಶ್ರೀಗಳವರು ಉಪಸ್ಥಿತರಿದ್ದು ಶ್ರೀ ಜಗದ್ಗುರುಗಳಿಂದ ಆಶೀರ್ವಾದ ಪಡೆದರು. ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ನಾಲ್ಕು ದಿನಗಳ ಕಾಲ ನಡೆಸಿಕೊಂಡು ಬಂದ ಆಧ್ಯಾತ್ಮಿಕ ಪ್ರವಚನವನ್ನು ಇದೇ ಸಂದರ್ಭದಲ್ಲಿ ಮುಕ್ತಾಯಗೊಳಿಸಿದರು.

ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಣೆ ಮಾಡಿದರು. ಜಾನಪದ ಕಲಾವಿದ ಎಮ್.ಆರ್. ತೋಟಗಂಟಿ ಸಂಗಡಿಗರಿಂದ ಭಕ್ತಿ ಗೀತೆ ಜರುಗಿತು.

# ಅವಧಿ ನುಂಗಿದ ಸದಸ್ಯನ ನೇಮ್ ಪ್ಲೇಟ್!

▶▶ಮೊದಲನೇ ಪುಟದಿಂದ

ಈ ವೇಳೆ ಹಿರಿಯ ಸದಸ್ಯ ರಾಜೀವ ಕುಂಬಿ ಮಾತನಾಡಿ, ಯಾವುದೇ ವಿಷಯವಾಗಲಿ ಅಧ್ಯಕ್ಷರನ್ನೊಳಗೊಂಡು ಸರ್ವ ಸದಸ್ಯರನ್ನು ವಿಶ್ವಾಸ, ಸಹಕಾರ ತೆಗೆದುಕೊಂಡು ಕೆಲಸ ಮಾಡುವುದಾದರೆ ಮಾಡಿ ಎಂದರು. ಅದಕ್ಕೆ ಮುಖ್ಯಾಧಿಕಾರಿ ಮಹೇಶ ಹಡಪದ, ಯಾರನ್ನೂ ಅವಮಾನಿಸುವ ಉದ್ದೇಶ ತಮ್ಮದಲ್ಲ. ಇದು ನಮ್ಮ ಸಿಬ್ಬಂದಿಗಳ ತಪ್ಪಿನಿಂದಾಗಿದೆ. ಇನ್ನು ಮುಂದೆ ಅಧ್ಯಕ್ಷರು, ಸರ್ವ ಸದಸ್ಯರ ವಿಶ್ವಾಸ, ಸಹಕಾರದೊಂದಿಗೆ ಕಾರ್ಯನಿರ್ವಹಿಸುತ್ತೇನೆ ಎಂದರು.

ಪುರಸಭೆಯ ಅಂಗ ಶಿಕ್ಷಣ ಸಂಸ್ಥೆ ಉಮಾ ವಿದ್ಯಾಲಯ ಹೈಸ್ಕೂಲ್ ಮೈದಾನಕ್ಕೆ ಹೊಂದಿಕೊಂಡಿರುವ 2 ಎಕರೆ 34 ಗುಂಟೆ ಜಮೀನಿನಲ್ಲಿ ಪ್ರಜಾಸೌಧ ನಿರ್ಮಿಸಲು ಒಪ್ಪಿಗೆ ಸೂಚಿಸುವ ವಿಷಯಕ್ಕೆ ಸಂಬಂಧಿಸಿದಂತೆ ಈ ಸ್ಥಳದಲ್ಲಿ ಕ್ರೀಡಾಂಗಣವಾಬೇಕು ಎಂಬ ಬಗ್ಗೆ ಈ ಹಿಂದಿನಿಂದಲೂ ಮತ್ತು ಇತ್ತೀಚಿನ ದಿನಗಳಲ್ಲಿ ಕ್ರೀಡಾಭಿಮಾನಿಗಳು, ಸಂಘಟನೆಗಳು ಮನವಿ ಸಲ್ಲಿಸಿವೆ.

ಪ್ರಜಾಸೌಧ ನಿರ್ಮಾಣಕ್ಕೆ ಬೇರೆಡೆ ಸ್ಥಳ ಖರೀದಿಸಬೇಕು. ಇಲ್ಲವೇ ಈ ಪ್ರದೇಶಕ್ಕೆ ಹೊಂದಿಕೊಂಡಿರುವ ಜಮೀನನ್ನು ಖರೀದಿಸುವಂತೆ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲು ಮಹೇಶ ಹೊಗೆಸೊಪ್ಪಿನ, ರಾಜೀವ ಕುಂಬಿ ಮುಖ್ಯಾಧಿಕಾರಿಗಳಿಗೆ ಸಲಹೆ ನೀಡಿದರು.

ಆದರೆ ಈ ಸರ್ವೆ ನಂಬರಿನ ಭೂಮಿ ಕಂದಾಯ ಇಲಾಖೆಗೆ ಸೇರಿದ್ದರಿಂದ ಈಗಾಗಲೇ ಶಾಸಕರು, ಮಾಜಿ ಶಾಸಕರು, ಉಪವಿಭಾಗಾಧಿಕಾರಿಗಳನ್ನೊಳಗೊಂಡು ಸ್ಥಳ ಪರಿಶೀಲಿಸಿ ಪ್ರಜಾಸೌಧ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಿರುವುದು ಗಮನಾರ್ಹ. ಆದಾಗ್ಯೂ ಈ ಚರ್ಚೆ ಎಷ್ಟರ ಮಟ್ಟಿಗೆ ಸರಿ ಎಂಬ ಮಾತುಗಳು ಸದಸ್ಯರೊಳಗೆ ಚರ್ಚಿತವಾದವು.

ಸಭೆಯಲ್ಲಿ ಇತ್ತೀಚೇಗೆ ನಿಧನರಾದ ಮಾಜಿ ಪ್ರಧಾನಮಂತ್ರಿ ಡಾ. ಮನಮೋಹನ್ ಸಿಂಗ್, ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ವಾರ್ಡ್ ನಂ-13ರ ಉಪಚುನಾವಣೆಯಲ್ಲಿ ಅವಿರೋಧ ಆಯ್ಕೆಗೊಂಡ ಸದಸ್ಯೆ ಶೋಭಾ ಬಸವರಾಜ ಮೆಣಸಿನಕಾಯಿ ಹಾಗೂ ಸರಕಾರದಿಂದ ನಾಮನಿದೇಶಿತಗೊಂಡ ಸದಸ್ಯರಾದ ನೀಲಪ್ಪ ಪೂಜಾರ, ಶಿವಪ್ರಕಾಶ ಕೊಂಚಿಗೇರಿಮಠ, ಕಿರಣ ನವಲೆ, ಮಹಾಂತೇಶ ಗುಡಿಸಲಮನಿ, ವಾಸೀಂಅಕ್ರಮ್ ಮುಚ್ಚಾಲೆ ಅವರು ಸಭೆಯಲ್ಲಿ ಪ್ರಮಾಣವಚನ ಸ್ವೀಕರಿಸಿದರು.

ಪುರಸಭೆಯ ಸರ್ವ ಸದಸ್ಯರು, ಮುಖ್ಯಾಧಿಕಾರಿ ಮಹೇಶ ಹಡಪದ, ವ್ಯವಸ್ಥಾಪಕಿ ಮಂಜುಳಾ ಹೂಗಾರ, ಶೋಭಾ ಬೆಳ್ಳಿಕೊಪ್ಪ, ಇಂಜಿನಿಯರ್ ವಿರೇಂದ್ರಸಿಂಗ್ ಕಾಟೇವಾಲೆ, ಹನುಮಂತ ನಂದೆಣ್ಣವರ ಸೇರಿದಂತೆ ಅನೇಕರಿದ್ದರು.

## ರಸ್ತೆ ಸುರಕ್ಷತಾ ಜಾಗೃತಿ ಜಾಥಾದಲ್ಲಿ ಕೆಎಸ್‌ಆರ್‌ಟಿಸಿ ನಿರ್ದೇಶಕರಾದ ಪ್ರಿಯಾಂಗಾ ಎಂ

# ಪ್ರತಿಯೊಬ್ಬರೂ ಸಂಚಾರ ನಿಯಮ ಪಾಲಿಸಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾಹನ ಚಲಾಯಿಸುವಾಗ ಸಂಚಾರ ದೀಪಗಳ ಕಡೆಗೆ ಹೆಚ್ಚಿನ ಗಮನ ಹರಿಸಬೇಕು. ಪ್ರತಿಯೊಬ್ಬರೂ ಸಂಚಾರ ನಿಯಮಗಳನ್ನು ಪಾಲಿಸಲು ಮುಂದಾಗಬೇಕು ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ. ಹೇಳಿದರು.



ಶುಕ್ರವಾರ ವಿದ್ಯಾನಗರದ ಬಿ.ವಿ.ಬಿ ಕಾಲೇಜ್ ಹತ್ತಿರವಿರುವ ಬಿ.ಆರ್.ಟಿ.ಎಸ್ ಪಾಸ್ ಪಾಯಿಂಟ್ ಹತ್ತಿರ ಹುಬ್ಬಳ್ಳಿ ಧಾರವಾಡ ನಗರ ಸಾರಿಗೆ ವಿಭಾಗ, ಪ್ರಾದೇಶಿಕ ಸಾರಿಗೆ ಕಚೇರಿ, ಪೊಲೀಸ್ ಇಲಾಖೆ ಹಾಗೂ ಬಿ.ವಿ.ಬಿ ಕಾಲೇಜಿನ ಸಹಯೋಗದೊಂದಿಗೆ ಏರ್ಪಡಿಸಿದ್ದ ರಸ್ತೆ ಸುರಕ್ಷತಾ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ದೇಶದಲ್ಲಿ ಸುಮಾರು ಪ್ರತೀ ವರ್ಷ 4.68 ಲಕ್ಷ ರಸ್ತೆ ಅಪಘಾತಗಳಾಗುತ್ತಿದ್ದು, ಈ ಅಪಘಾತಗಳಿಂದ ಸುಮಾರು 1.68 ಲಕ್ಷ ಜನ ಮೃತಪಟ್ಟಿದ್ದು, ಸುಮಾರು 4.53 ಲಕ್ಷ ಜನ ಗಾಯಾಳುಗಳಾಗಿದ್ದಾರೆ. ಗಾಯಾಳುಗಳಿಗೆ ಅವರು ಕುಟುಂಬಕ್ಕೆ ಗಳಿಸುತ್ತಿದ್ದ ಆದಾಯದ ಲೆಕ್ಕಾಚಾರದಲ್ಲಿ ಅಪಘಾತ ಪರಿಹಾರವನ್ನು ದೊರಕಿಸಿಕೊಡಲಾಗುತ್ತಿದೆ. ಆದರೆ ಕುಟುಂಬಕ್ಕೆ ಆಸರೆಯಾದ ಜೀವ ಇಲ್ಲ ಎಂಬ ಕೊರಗು ಅವರಿಗೆ ಕಾಡುತ್ತದೆ. ಇಂದು ತಂತ್ರಜ್ಞಾನ ಸಾಕಷ್ಟು ಬೆಳೆವಣಿಗೆ ಹೊಂದಿದರೂ ಸಹ ಅಪಘಾತಗಳನ್ನು ತಡೆಯಲು ಸಾಧ್ಯವಾಗುತ್ತಿಲ್ಲ. ದ್ವಿಚಕ್ರ ವಾಹನ ಚಲಾಯಿಸುವಾಗ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ವಿದ್ಯಾರ್ಥಿಗಳು, ಸಾರ್ವಜನಿಕರು ವಾಹನ ಓಡಿಸುವಾಗ ಜಾಗರೂಕತೆ ವಹಿಸಬೇಕಾಗುತ್ತದೆ ಎಂದು ತಿಳಿಸಿದರು.

ಕೆಎಲ್ಇ ತಾಂತ್ರಿಕ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಪ್ರಕಾಶ ತೆವಾರಿ ಮಾತನಾಡಿ, ವಿದ್ಯಾರ್ಥಿಗಳು ಬೈಕ್ ಚಲಾಯಿಸುವಾಗ ಎಚ್ಚರಿಕೆ ವಹಿಸಬೇಕು. ಅವಸರದ ಪ್ರಯಾಣ ಪ್ರಾಣ ಹಾನಿಗೆ ಕಾರಣವಾಗುತ್ತದೆ. ಕಾರ ಚಲಾಯಿಸುವಾಗ ಕಡ್ಡಾಯವಾಗಿ ಸೀಟ್ ಬೆಲ್ಟ್ ಹಾಕಿಕೊಳ್ಳಬೇಕು. ವಾಹನಕ್ಕೆ ಸಂಬಂಧಿಸಿದ ದಾಖಲೆಗಳನ್ನು ಹೊಂದಿರಬೇಕು ಎಂದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ಕೆ. ದಾಮೋದರ ಮಾತನಾಡಿ, ಪ್ರತಿಯೊಬ್ಬ ನಾಗರಿಕ ರಸ್ತೆ ಸುರಕ್ಷತೆ ಬಗ್ಗೆ ಗಮನ ಹರಿಸಬೇಕು. ಅತೀ ವೇಗದ ಪ್ರಯಾಣ ಅಪಾಯಕ್ಕೆ ದಾರಿ ಮಾಡಿಕೊಡುತ್ತದೆ. ವಾಹನ ಓಡಿಸುವಾದ ವೇಗದ ಮಿತಿ ನಿಯಂತ್ರಣದಲ್ಲಿ ಇರಬೇಕು. ಮದ್ಯಪಾನ ಮಾಡಿ ವಾಹನ ಚಲಾಯಿಸಬಾರದು. ಸಾರಿಗೆ ಕಚೇರಿಯಲ್ಲಿ ಪ್ರತಿ ತಿಂಗಳು 600 ವಾಹನಗಳು ನೋಂದಣಿಯಾಗುತ್ತವೆ. ಒಂದು ವರ್ಷಕ್ಕೆ ಸುಮಾರು 32 ಸಾವಿರ ವಾಹನಗಳು ನೋಂದಣಿ ಆಗುವವು. ಅಪಘಾತದಿಂದ ಅಂಗವೈಕಲ್ಯ ಹಾಗೂ ಕುಟುಂಬಸ್ಥರಿಗೆ ತೊಂದರೆ ಆಗುತ್ತದೆ. ಹೀಗಾಗಿ ಸುರಕ್ಷತೆಯಿಂದ ವಾಹನವನ್ನು ಚಲಾಯಿಸಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ವಿದ್ಯಾನಗರದ ಬಿ.ವಿ.ಬಿ ಕಾಲೇಜ್ ಹತ್ತಿರವಿರುವ ಬಿ.ಆರ್.ಟಿ.ಎಸ್ ಪಾಸ್ ಪಾಯಿಂಟ್‌ನಿಂದ ಕೋತಂಬ್ರಿ ಕಾಲೇಜಿನ ವೃತ್ತದವರೆಗೆ ರಸ್ತೆ ಸುರಕ್ಷತಾ ಜಾಥಾ ನಡೆಯಿತು. ಕಾರ್ಯಕ್ರಮದಲ್ಲಿ ಇಲಾಖಾ ಮುಖ್ಯಸ್ಥರಾದ ವಿವೇಕಾನಂದ ವಿಶ್ವಜ್ಞ, ಹುಬ್ಬಳ್ಳಿ ಧಾರವಾಡ ನಗರ ಸಾರಿಗೆ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಸಿದ್ಧಲಿಂಗೇಶ, ಎಸ್.ಡಿ. ಬೆಲ್ಲದ, ಜಿ.ವಿ.ದಿನಮಣಿ, ಗುರುಪ್ರಸಾದ, ಅಬ್ದುಲ್ ಸಲಾಂ ಧಾರವಾಡವಾಲೆ, ಶಂಕರ ಕಲಾಲ್, ಗೃಹ ರಕ್ಷಕದಳ ಸಿಬ್ಬಂದಿ, ಪೊಲೀಸ್ ಇಲಾಖೆ ಹಾಗೂ ವಿವಿಧ ಕಾಲೇಜಿನ ವಿದ್ಯಾರ್ಥಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

ಬಿವಿಬಿ ಕಾಲೇಜಿನ ಪ್ರಾಧ್ಯಾಪಕರಾದ ರಂಜಿತಾ ನಿರೂಪಿಸಿ, ವಂದಿಸಿದರು.

ಸಹಾಯಕ ಪೊಲೀಸ್ ಆಯುಕ್ತರಾದ ವಿನೋದ ಮುಕ್ತೆದಾರ ಮಾತನಾಡಿ, ಪ್ರತಿಯೊಬ್ಬರೂ ಕಡ್ಡಾಯವಾಗಿ ಸಂಚಾರ ನಿಯಮಗಳನ್ನು ಪಾಲಿಸಬೇಕು. ಚಾಲನಾ ಪತ್ರ ಪಡೆಯುವುದು ತುಂಬಾ ಕಠಿಣ. ಅಪಘಾತಗಳು ಆಗದ ರೀತಿಯಲ್ಲಿ ವಾಹನ ಚಲಾಯಿಸಬೇಕು. ಅಪ್ರಾಪ್ತರಿಗೆ ವಾಹನವನ್ನು ಚಲಾಯಿಸಲು ನೀಡಬಾರದು ಎಂದು ಮನವರಿಕೆ ಮಾಡಿದರು.

# ಹಿಂದೂ ರಾಷ್ಟ್ರ ಸಂವಿಧಾನ ರಚನೆಗೆ ಖಂಡನೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಂವಿಧಾನ ವಿರೋಧಿಸಿ ಹೊಸದಾಗಿ ನಿರ್ಮಿಸಲು ಹೊರಟಿರುವ ಅಖಂಡ ಹಿಂದೂ ರಾಷ್ಟ್ರ ಸಂವಿಧಾನ ರಚನೆ ವಿರುದ್ಧ ಮತ್ತು ಬಹುಜನರ ವಿರೋಧಿ ಚಟುವಟಿಕೆಯನ್ನು ಖಂಡಿಸಿ ಗದಗ ಜಿಲ್ಲಾ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನರಾವ್ ಸಮಾನತೆ ಸಮಿತಿ ವತಿಯಿಂದ ತಹಸೀಲ್ದಾರರಿಗೆ ಮನವಿ ಪತ್ರವನ್ನು ಮನವಿಯನ್ನು ಸಲ್ಲಿಸಿದರು.

ಸಮಿತಿಯ ಜಿಲ್ಲಾ ಸಂಚಾಲಕ ಗೋವಿಂದರಾಜ ಬಳ್ಳಾರಿ ಮಾತನಾಡಿ, ಮಹಾ ಕುಂಭಮೇಳದಲ್ಲಿ ಅನಾವರಣಗೊಳಿಸಲು ಉದ್ದೇಶಿಸಿರುವ ಅಖಂಡ ಹಿಂದೂ ರಾಷ್ಟ್ರದ ಸಂವಿಧಾನ ರಚನೆ ಹಾಗೂ ಜಾತಿ ವಿರೋಧಿ ಚಟುವಟಿಕೆಗಳನ್ನು ನಡೆಸಲು ಪ್ರಚೋದನೆ ನೀಡುತ್ತಿರುವ ಬಿ.ಜೆ.ಪಿ ಹಾಗೂ ಎನ್.ಡಿ.ಎ ಮೈತ್ರಿಕೂಟ, ಭಾರತ ಸರ್ಕಾರದ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ನಡೆಯನ್ನು ಖಂಡಿಸಿದರು.

ಈ ಸಂದರ್ಭದಲ್ಲಿ ದಲಿತ ಮುಖಂಡರಾದ ಮಾರ್ತಾಂಡಪ್ಪ ಹಾದಿಮನಿ, ಯುವರಾಜ ಬಳ್ಳಾರಿ, ನವೀನ ಭಂಡಾರಿ, ಪೃಥ್ವಿ ಪರಾಪೂರ, ಮಹೇಶ ನಾನಬಾಲ, ಸುಂಕಪ್ಪ ಗುತ್ತಿ, ನಾಗರಾಜ ಕಿನ್ನಾರಿ, ಮಂಜುನಾಥ ಚಂದ್ರಗಿರಿ, ನಾರಾಯಣ ಕಿನ್ನಾಳ, ವರ್ಧನ ತೌಜುಲ್, ವಿನಾಯಕ ಬಳ್ಳಾರಿ, ಪ್ರಜ್ವಲ್ ಯಟ್ಟಿ, ಪವನ ಬಳ್ಳಾರಿ, ನಿತಿನ ಬಳ್ಳಾರಿ ಮುಂತಾದವರು ಉಪಸ್ಥಿತರಿದ್ದರು.

# ಗಾಂಧೀಜಿ ಜೀವನದ ಮೌಲ್ಯಗಳನ್ನು ಅಳವಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ವಿಜಯಪುರ

ಮಹಾತ್ಮ ಗಾಂಧೀಜಿಯವರ ಆತ್ಮಚರಿತ್ರೆಯನ್ನು ವಿದ್ಯಾರ್ಥಿಗಳು ಓದಿ ಅವರ ತತ್ವಗಳನ್ನು ಅರಿಯಬೇಕು ಎಂದು ಮಹಿಳಾ ವಿವಿಯ ಹಂಗಾಮಿ ಕುಲಪತಿ ಪ್ರೊ. ಶಾಂತಾದೇವಿ ಟಿ ಹೇಳಿದರು.



ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದಲ್ಲಿ ಆಯೋಸಿದ್ದ ಹುತಾತ್ಮ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದೇಶಕ್ಕಾಗಿ ಅನೇಕ ಸೈನಿಕರು ತಮ್ಮ ಪ್ರಾಣತ್ಯಾಗ ಮಾಡಿ ಹುತಾತ್ಮರಾಗುತ್ತಾರೆ ಮತ್ತು ಅನೇಕ ಸಂಕಟಗಳನ್ನು ಎದುರಿಸುತ್ತಾರೆ. ಅವರ ತತ್ವಗಳಲ್ಲಿ ಸತ್ಯ ಮತ್ತು ಅಹಿಂಸೆ ಪ್ರಮುಖವಾಗಿವೆ. ಗಾಂಧೀಜಿಯವರು ಹೇಗೆ ಹುತಾತ್ಮರಾದರು ಹಾಗೂ ಅವರ ಆತ್ಮಚರಿತ್ರೆಯ ಮಹತ್ವವನ್ನು ಅರ್ಥೈಸಲು, ಅವರ ಜೀವನವನ್ನು ಅಧ್ಯಯನ ಮಾಡುವುದು ಅವಶ್ಯಕ. ಅವರ ಜೀವನದ ಮೌಲ್ಯಗಳನ್ನು ನಾವು ಜೀವನದಲ್ಲಿ ಅಳವಡಿಸಿಕೊಂಡರೆ, ಸಮರ್ಪಕ ಮತ್ತು ಶ್ರೇಷ್ಠ ಸಮಾಜವನ್ನು ನಿರ್ಮಿಸಬಹುದು ಎಂದರು.

ಮಹಿಳಾ ವಿವಿಯ ಕುಲಸಚಿವ ಶಂಕರಗೌಡ ಸೋಮನಾಳ ಮಾತನಾಡಿ, ವಿದ್ಯಾರ್ಥಿನಿಯರು ಗಾಂಧೀಜಿಯವರ ಸತ್ಯ ಮತ್ತು ಅಹಿಂಸಾ ತತ್ವಗಳನ್ನು ಪಾಲಿಸಿ ಸಮಾಜದಲ್ಲಿ ನೈತಿಕ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು.

ಮಹಾತ್ಮ ಗಾಂಧೀಜಿ ಸತ್ಯ ಮತ್ತು ಅಹಿಂಸೆಯನ್ನು ಜೀವನದ ಪ್ರಮುಖ ತತ್ವಗಳಾಗಿ ಸ್ವೀಕರಿಸಿದರು ಮತ್ತು ಅಹಿಂಸೆಯ ಮೂಲಕ ಅನ್ಯಾಯದ ವಿರುದ್ಧ ಹೋರಾಡಿದರು. ಗಾಂಧೀಜಿಯವರ ಪ್ರಭಾವದಿಂದ ಅನೇಕ ಜನರು ಪ್ರೇರಿತರಾಗಿ ಅವರ ತತ್ವಗಳನ್ನು ಅನುಸರಿಸಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಎನ್.ಎಸ್.ಎಸ್ ಘಟಕದ ಅಧಿಕಾರಿ ಪ್ರೊ. ವಿಷ್ಣು ಶಿಂಧೆ, ಡಾ. ಕಲಾವತಿ ಕಾಂಬಳೆ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ಸಂಶೋಧನಾ ವಿದ್ಯಾರ್ಥಿನಿಯರು, ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ವಿವಿಯ ಎನ್.ಎಸ್.ಎಸ್ ಕೋಶದ ಸಂಯೋಜನಾಧಿಕಾರಿ ಪ್ರೊ. ಅಶೋಕ್‌ಕುಮಾರ್ ಸುರಪುರ ಸ್ವಾಗತಿಸಿದರು. ವಿದ್ಯಾರ್ಥಿನಿ ಸಂತೋಷಿ ಮಾತಾ ನಿರೂಪಿಸಿದರು. ಗಾಂಧಿ ಅಧ್ಯಯನ ಕೇಂದ್ರದ ಸಂಯೋಜಕ ಡಾ. ಅಮರನಾಥ ಪ್ರಜಾಪತಿ ವಂದಿಸಿದರು.

# ಹೋಮ-ಹವನಗಳಿಂದ ಬದುಕಿಗೆ ನೆಮ್ಮದಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹೋಮ-ಹವನಗಳಿಗೆ ನಮ್ಮ ಹಿರಿಯರು ಹಿಂದಿನ ಕಾಲದಲ್ಲಿ ಬಹಳ ಮಹತ್ವ ನೀಡಿದ್ದರು. ಈ ಮೂಲಕ ಅವರು ತಮ್ಮ ಮನಸ್ಸಿನ ಅಭೀಷ್ಟೆಗಳನ್ನು ನೆರವೇರಿಸಿಕೊಳ್ಳುತ್ತಿದ್ದರು. ನಮ್ಮ ಸನಾತನ ಧರ್ಮದಲ್ಲಿ ಹೋಮಗಳಿಂದ ಮನುಷ್ಯರು ನೆಮ್ಮದಿಯ ಬದುಕನ್ನು ಬದುಕುತ್ತಿದ್ದರು. ಇಂದಿಗೂ ಆ ಪರಂಪರೆ ಮುಂದುವರೆದಿದ್ದು, ಈ ಮೂಲಕ ನಾವು ನಮ್ಮ ಜೀವನಕ್ಕೆ ಶಾಂತಿ ಮತ್ತು ಬದುಕಿಗೆ ನೆಮ್ಮದಿಯನ್ನು ಪಡೆಯಬಹುದು ಎಂದು ಮಲ್ಲಸಮುದ್ರ ಓಂಕಾರಗಿರಿ ಹಿರೇಮಠದ ಶ್ರೀ ಫಕೀರೇಶ್ವರ ಪಟ್ಟಾಧ್ಯಕ್ಷರು ಹೇಳಿದರು.



ಕೋಡಿಕೊಪ್ಪದ ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆ ಶತಮಾನೋತ್ಸವದ ನಿಮಿತ್ತ ಶ್ರೀಮಠದಲ್ಲಿ ಪ್ರಾರಂಭಗೊಂಡ ವಿವಿಧ ಹೋಮಗಳ ಕಾರ್ಯವನ್ನು ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.

ಹೋಮಗಳ ಮೂಲಕ ಅರ್ಪಿಸುವ ಹವಿಸ್ಸು ಭಗವಂತನಿಗೆ ಸಮರ್ಪಣೆಯಾಗುತ್ತದೆ. ಯಾವ ದೇವನನ್ನು ಸ್ಮರಿಸಿ ನಾವು ಹೋಮ ಮಾಡುತ್ತೇವೆಯೋ ಆ ದೇವರು ಸಂತೃಪ್ತನಾಗಿ ಒಲಿದು ನಮ್ಮ ಬೇಡಿಕೆಗಳಿಗೆ ಅಸ್ತು ಎನ್ನುತ್ತಾನೆ. ಅದಕ್ಕಾಗಿ ನಾವು ಶುದ್ಧ ಮತ್ತು ನಿರ್ಮಲ ಮನದಿಂದ ಹೋಮ ಕಾರ್ಯಗಳಲ್ಲಿ ಪಾಲ್ಗೊಳ್ಳಬೇಕೆಂದು ಶ್ರೀಗಳು ತಿಳಿಸಿದರು.

ಪೂಜೆ ಮತ್ತು ಹೋಮಗಳ ಪೌರೋಹಿತ್ಯವನ್ನು ಶ್ರೀ ಜಗದ್ಗುರು ಪಂಚಾಚಾರ್ಯ ವೇದ ಸಂಸ್ಕೃತ ಪಾಠಶಾಲೆಯ ಮುಖ್ಯಾಧ್ಯಾಪಕ ಪಂ. ಗುರುಸಿದ್ದಯ್ಯಸ್ವಾಮಿ ಹಿರೇಮಠ ವಹಿಸಿಕೊಂಡಿದ್ದಾರೆ. ಹೋಮದ ಯಜಮಾನತ್ವವನ್ನು ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ದಂಪತಿಗಳು ವಹಿಸಿಕೊಂಡಿದ್ದರು.

ಟ್ರಸ್ಟ್ ಕಮಿಟಿ ಅಧ್ಯಕ್ಷ ಡಾ. ಮಲ್ಲಯ್ಯ ಚಪ್ಪನ್ನಮಠ ಮತ್ತು ಸದಸ್ಯರು ಉಪಸ್ಥಿತರಿದ್ದರು. ಈ ಹೋಮ ಕಾರ್ಯಗಳು ಫೆ. 5ರವರೆಗೆ ಜರುಗಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಡಾ. ಎಲ್.ಎಸ್. ಗೌರಿ ತಿಳಿಸಿದರು.

# ಕ್ರೀಡೆಗಳಿಂದ ಸ್ಪರ್ಧಾತ್ಮಕ ಮನೋಭಾವ

■ವಿಜಯಸಾಕ್ಷಿ ಸುದ್ದಿ, ಗದಗ

ಕ್ರೀಡೆಗಳು ವಿದ್ಯಾರ್ಥಿಗಳಲ್ಲಿ ಶಿಸ್ತು ಹಾಗೂ ಬದ್ಧತೆಯೊಂದಿಗೆ ಸ್ಪರ್ಧಾತ್ಮಕ ಮನೋಭಾವವನ್ನು ಬೆಳೆಸುತ್ತವೆ. ದೈಹಿಕವಾಗಿ ಆರೋಗ್ಯ ಸದೃಢತೆಗೆ ಕ್ರಿಡೆಗಳು ಸಹಕಾರಿ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಹೇಳಿದರು.



ಅವರು ಗದಗ ರಾಜೀವಗಾಂಧಿ ನಗರದ ಉರ್ದು ಸರ್ಕಾರಿ ಶಾಲೆಯ ಮಕ್ಕಳ ವಾರ್ಷಿಕ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದರು.

ನಾಯಕತ್ವ ಗುಣ, ಸಹಯೋಗದ ಕೌಶಲ್ಯದ ಜೊತೆಗೆ ಜೀವನದಲ್ಲಿ ಸೋಲು-ಗೆಲುವನ್ನು ಏಕಮುಖವಾಗಿ ತಗೆದುಕೊಳ್ಳಬೇಕು ಎಂಬುದನ್ನು ಕ್ರೀಡೆಗಳು ತಿಳಿಸುತ್ತವೆ. ವಿಶೇಷಚೇತನ ಮಕ್ಕಳನ್ನು ಸಮನ್ವಯಗೊಳಿಸಿ ಅವರನ್ನೊಳಗೊಂಡು ಶಾಲಾ ಕ್ರೀಡೆಗಳು ನಡೆಯಲಿ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಉರ್ದು ಸಿ.ಆರ್.ಪಿ ಕಲೀದ್ ಅಹಮದ್ ಜಲಗೇರಿ ವಿಶೇಷ ಚೇತನರ ಪರಿಸರ ನಿರ್ಮಾಣ ಬಿತ್ತಿ ಪತ್ರವನ್ನು ಬಿಡುಗಡೆಗೊಳಿಸಿ ಮಾತನಾಡಿ, ಕ್ರೀಡೆಗಳು ವಿದ್ಯಾರ್ಥಿಗಳಿಗೆ ಗಟ್ಟಿ ನಿರ್ಧಾರಗಳನ್ನು ತಗೆದುಕೊಳ್ಳುವ ಉತ್ತಮ ಕೌಶಲ್ಯ, ಆತ್ಮವಿಶ್ವಾಸ ಮೂಡಿಸುತ್ತವೆ ಎಂದರು.

ಪ್ರಾಸ್ತಾವಿಕವಾಗಿ ಶಿಕ್ಷಕ ಐ.ಬಿ. ಗಾಡಗೋಳಿ ಮಾತನಾಡಿ, ಆಟ-ಪಾಠಗಳು ಮಕ್ಕಳಲ್ಲಿ ಕಲಿಕಾಸಕ್ತಿಯನ್ನು ಹೆಚ್ಚಿಸುತ್ತವೆ. ಅಭಿರುಚಿಗೆ ಅನುಗುಣವಾಗಿ ಮಕ್ಕಳು ಕ್ರೀಡೆಗಳಲ್ಲಿ ಪಾಲ್ಗೊಳ್ಳುವುದರಿಂದ ಕಲಿಕೆಯಲ್ಲಿ ಪ್ರಗತಿ ಕಂಡುಬರುತ್ತದೆ ಎಂದರು. ಅಧ್ಯಕ್ಷತೆಯನ್ನು ಶಾಲಾ ಮುಖ್ಯೋಪಾಧ್ಯಾಯೆ ಖೈರುನ್ನಿಸಾ ದಾವಲಖಾನ ವಹಿಸಿದ್ದರು. ಎನ್.ಎಚ್. ಜಕ್ಕಲಿ ಸ್ವಾಗತಿಸಿದರು. ಹೆಚ್.ಬಿ. ಮಕಾನದಾರ ನಿರೂಪಿಸಿದರು. ಎಸ್.ಎಸ್. ಬಳ್ಳಾರಿ ವಂದಿಸಿದರು.

ಕಾರ್ಯಕ್ರಮದಲ್ಲಿ ಅಂಗನವಾಡಿ ಕಾರ್ಯಕರ್ತೆ ಸಾವಿತ್ರಿ ಪಿಳ್ಳೆ, ಸಹಾಯಕಿ ಶಕೀಲಾ ನದಾಫ್, ಬಸವಣ್ಣೆವ್ವ ಮುಳ್ಳಾಳ, ನೀಲವ್ವ ರೊಟ್ಟಿ, ಗೀತಾ ಸಾಲಿಮಠ, ರಾಹೀಲಾ ಹೊಸಳ್ಳಿ ಮುಂತಾದವರು ಉಪಸ್ಥಿತರಿದ್ದರು.

# ನಾಳೆ ಎಚ್.ಕೆ.ಪಾಟೀಲ ಸೇವಾ ತಂಡದಿಂದ ಉಚಿತ ಹೃದಯ ತಪಾಸಣಾ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ಎಚ್.ಕೆ.ಪಾಟೀಲ ಸೇವಾ ತಂಡದಿಂದ ಪೆಬ್ರವರಿ 2ರಂದು ಭಾನುವಾರ ಮುಂಜಾನೆ 10ಗಂಟೆಯಿಂದ ಮಧ್ಯಾಹ್ನ 4ಗಂಟೆಯವರೆಗೆ ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಉಚಿತ ಹೃದಯ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿದೆ. ಕಾರಣ ಗದಗ ಮತಕ್ಷೇತ್ರದಲ್ಲಿ ಹೃದಯ ತೊಂದರೆಯಿಂದ ಬಳಲುತ್ತಿರುವವರು ಈ ಶಿಬಿರದ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಎಚ್.ಕೆ.ಪಾಟೀಲ ಸೇವಾ ತಂಡದ ಸಂಯೋಜಕರಾದ ಬಿ.ಬಿ.ಅಸೂಟಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ನಿಧನ



### ಯಲ್ಲೋಸಾ ಖೋಡೆ

ಗದಗ: ನಗರದ 31ನೇ ವಾರ್ಡ್ ನ ಜೋಡ ಮಾರುತಿ ದೇವಸ್ಥಾನ ಬಳಿಯ ಕಿಲ್ಲಾ ಓಣಿಯ ಎಸ್‌ಎಸ್‌ಕೆ ಸಮಾಜದ ಹಿರಿಯರಾದ

ಸದ್ಯ ವಿಜಯನಗರ ಸ್ಕೂಲ್ ಹತ್ತಿರ ವಾಸವಾಗಿದ್ದ ಯಲ್ಲೋಸಾ ರಾಮನಾಥಸಾ ಖೋಡೆ (72) ಅವರು ಶುಕ್ರವಾರ ಮಧ್ಯಾಹ್ನ 1.30 ಗಂಟೆಗೆ ನಿಧನರಾದರು. ಮೃತರ ಅಂತ್ಯಕ್ರಿಯೆ ಸಂಜೆ 7 ಗಂಟೆಗೆ ಜರುಗಿತು. ಮೃತರು ಪತ್ನಿ, ಇಬ್ಬರು ಪುತ್ರರು, ಮೂವರು ಪುತ್ರಿಯರು, ಮೊಮ್ಮಕ್ಕಳು, ಅಳಿಯಂದಿರು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

# ಬೇಂದ್ರೆ ಕವಿತೆಗಳು ಇಂದಿಗೂ ಜನಪ್ರಿಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನಾಡಿನ ಹೆಸರಾಂತ ಜನಾನುರಾಗಿ ಕವಿ ದ.ರಾ. ಬೇಂದ್ರೆಯವರ ಮಕ್ಕಳು ಪ್ರತಿದಿನ ಓದುವ ರೂಢಿ ಬೆಳೆಸಿಕೊಳ್ಳಬೇಕು. ಬೇಂದ್ರೆಯವರು ರಚಿಸಿದ ಕವಿತೆಗಳು ಇಂದಿಗೂ ಜನಪ್ರಿಯವಾಗಿವೆ ಎಂದು ಸಿಆರ್‌ಪಿ ಸಂಪನ್ಮೂಲ ವ್ಯಕ್ತಿ ಸತೀಶ ಬೋಮಲೆ ಹೇಳಿದರು.



ಪಟ್ಟಣದ ಸರ್ಕಾರಿ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ಶುಕ್ರವಾರ ತಾಲೂಕು ಮಕ್ಕಳ ಸಾಹಿತ್ಯ ಪರಿಷತ್ತಿನ ವತಿಯಿಂದ ಹಮ್ಮಿಕೊಂಡಿದ್ದ ವರಕವಿ ದ.ರಾ. ಬೇಂದ್ರೆ ಅವರ 130ನೇ ಜನ್ಮ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಪರಿಷತ್ತಿನ ಅಧ್ಯಕ್ಷ ನಾಗರಾಜ ಹಣಗಿ ಮಾನತಾಡಿ, ದ.ರಾ. ಬೇಂದ್ರೆಯವರ ಸಾಹಿತ್ಯ ತನ್ನದೇ ಆದ ಮೌಲ್ಯ ಹೊಂದಿದೆ. ಅವರ ಕವನಗಳಲ್ಲಿ ದಿನನಿತ್ಯ ನಾವು ನಮ್ಮ ಬದುಕಿನಲ್ಲಿ ಅನುಭವಿಸುವ ಘಟನೆಗಳೇ ತುಂಬಿಕೊಂಡಿವೆ. ಹೀಗಾಗಿ ಅವರ ಕವನಗಳು ಸಾಮಾನ್ಯ ಪ್ರಜೆಯಿಂದ ಮೊದಲು ಮಾಡಿಕೊಂಡು ಎಲ್ಲರ ಮನವನ್ನೂ ಸೆರೆಹಿಡಿದು ಬಿಡುತ್ತವೆ. ಆದರೆ ಬೇಂದ್ರೆಯವರ ಸಾಹಿತ್ಯದ ಕುರಿತು ಇನ್ನಷ್ಟು ಹೆಚ್ಚಿನ ಕಾರ್ಯಕ್ರಮಗಳು ನಡೆಯಬೇಕಾದ ಅಗತ್ಯ ಇದೆ ಎಂದ ಅವರು, ಮಕ್ಕಳಿಗಾಗಿ ಅವರು ಬರೆದ ಪಾತರಗಿತ್ತಿ ಪಕ್ಕಾ ಕವಿತೆಯನ್ನು ಮಕ್ಕಳು ಮರೆಯಲು ಸಾಧ್ಯವೇ ಇಲ್ಲ. ಮಕ್ಕಳು ನಿತ್ಯವೂ ಬೇಂದ್ರೆಯವರ ಕವನಗಳನ್ನು ಓದಬೇಕು ಎಂದು ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕ ಬಿ.ಎಂ. ಕುಂಬಾರ ಮಾತನಾಡಿ, ಬಾಲ್ಯದಲ್ಲಿಯೇ ಮಕ್ಕಳು ಸಾಹಿತಿಗಳ ಕೃತಿಗಳನ್ನು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು. ನಮ್ಮ ಶಾಲೆಯ ಗ್ರಂಥಾಲಯದಲ್ಲಿ ಎಲ್ಲ ಸಾಹಿತಿಗಳ ಪುಸ್ತಕಗಳು ಇವೆ. ಅವುಗಳನ್ನು ಮಕ್ಕಳು ಓದಲು ಮುಂದಾಗಬೇಕು ಎಂದರು. ಶಿಕ್ಷಕಿ ಎಚ್.ಡಿ. ನಿಂಗರೆಡ್ಡಿ ಸ್ವಾಗತಿಸಿದರು. ಎಲ್.ಎ. ಬಣಕಾರ, ಅಕ್ಷತಾ ಕಾಟೇಗಾರ, ಲಕ್ಷ್ಮೀ ಹತ್ತಿಕಟ್ಟಿ, ಆರ್.ಕೆ. ಉಪನಾಳ, ಗೀತಾ ಗುರಿಕಾರ ಸೇರಿದಂತೆ ಎನ್‌ಟಿಸಿ ಶಿಬಿರಾರ್ಥಿಗಳು ಇದ್ದರು.

## ಸುವರ್ಣಮಹೋತ್ಸವ ಪೂರ್ವಭಾವಿ ಸಭೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ 49 ವರ್ಷಗಳಿಂದ ಯೋಗ ಶಿಕ್ಷಣ ಪ್ರಸಾರ ಸೇವಾ ಕಾರ್ಯದಲ್ಲಿ ನಿರತವಾಗಿರುವ ಸ್ಥಳೀಯ ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆ ಈ ವರ್ಷ ಮೇ ತಿಂಗಳಲ್ಲಿ ಸುವರ್ಣ ಮಹೋತ್ಸವ ಆಚರಿಸಿಕೊಳ್ಳಲು ಸನ್ನದ್ಧವಾಗಿದ್ದು, ಸುವರ್ಣ ಮಹೋತ್ಸವ ವಿಜೃಂಭಣೆ ಮತ್ತು ಸಮರ್ಥವಾಗಿ ನಡೆಯಬೇಕೆಂಬುದು ಯೋಗ ಬಂಧುಗಳ ಅಪೇಕ್ಷೆಯಾಗಿದೆ.

ಈ ಹಿನ್ನೆಲೆಯಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರ (ಬಸವೇಶ್ವರ ಪ್ರೌಢಶಾಲೆ ಆವರಣ)ದಲ್ಲಿ ಫೆ. 2ರ ಸಾಯಂಕಾಲ 5-30 ಗಂಟೆಗೆ ಪೂರ್ವಭಾವಿ ಸಮಾಲೋಚನೆ ಸಭೆ ಕರೆಯಲಾಗಿದೆ. ಸಭೆಯಲ್ಲಿ ಕಾರ್ಯಕ್ರಮ ಕುರಿತು ಚರ್ಚಿಸಲಾಗುವುದು.

ಜಿಲ್ಲೆಯಾದ್ಯಂತ ಯೋಗ ಸೇವೆ ಸಲ್ಲಿಸುತ್ತಿರುವ ಯೋಗ ಸಂಘ-ಸಂಸ್ಥೆಗಳ ಮುಖ್ಯಸ್ಥರು ಹಾಗೂ ಸಮಾಜಮುಖಿ ಕಾರ್ಯ ನಿರ್ವಹಿಸುತ್ತಿರುವ ಸಂಘ-ಸಂಸ್ಥೆಗಳ ಅಧ್ಯಕ್ಷರು, ಯೋಗ ಪೋಷಕರು, ಹಿರಿಯ ಯೋಗ ಸಾಧಕರು ಮತ್ತು ಯೋಗಾಸಕ್ತ ಬಂಧುಗಳಿಗೆಲ್ಲರೂ ಈ ಸಭೆಗೆ ಆಗಮಿಸುವಂತೆ ಸಂಘಟಿಕರ ಪರವಾಗಿ ಯೋಗ ಪಾಠಶಾಲೆಯ ಮ್ಯಾನೇಜರ್ ಎಂ.ಎಸ್. ಅಂಗಡಿ, ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟರ, ನಿರ್ದೇಶಕ ಕೆ.ಎಸ್. ಪಲ್ಲೇದ ವಿನಂತಿಸಿದ್ದಾರೆ.

## ಬಿಜೆಪಿ ಗ್ರಾಮೀಣ ಮಂಡಲ ಅಧ್ಯಕ್ಷರ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ವಿಧಾನಸಭಾ ಕ್ಷೇತ್ರದ ಗದಗ ಗ್ರಾಮೀಣ ಮಂಡಲದ ನೂತನ ಅಧ್ಯಕ್ಷರಾಗಿ ಹೊಸಳ್ಳಿ ಗ್ರಾಮದ ಹಾಲುಮತ ಸಮಾಜದ ಬೂದಪ್ಪ ಶಂಕ್ರಪ್ಪ ಹಳ್ಳಿ ಅವರನ್ನು ಪಕ್ಷದ ಹಿರಿಯರ ಮತ್ತು ಗದಗ ಗ್ರಾಮೀಣ ಮಂಡಲ ಕೋರ್ ಕಮಿಟಿ ನೇತೃತ್ವದಲ್ಲಿ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವ್ಹಿ. ಸಂಕನೂರ, ಚುನಾವಣಾಧಿಕಾರಿಗಳಾದ ಶಶಿಮೌಳಿ ಕುಲಕರ್ಣಿ, ಸಹ ಚುನಾವಣಾಧಿಕಾರಿಗಳಾದ ಎಂ.ಎಸ್. ಕರಿಗೌಡ್ರ, ಮಾಜಿ ಜಿಲ್ಲಾಧ್ಯಕ್ಷ ಮೋಹನ ಮಾಳಶೆಟ್ಟಿ, ಗ್ರಾಮೀಣ ಭಾಗದ ಪ್ರಮುಖರುಗಳಾದ ಬಿ.ಎಸ್. ಚಿಂಚಲಿ, ಭದ್ರೇಶ ಕುಸ್ಲಾಪೂರ, ನಾಗರಾಜ ಕುಲಕರ್ಣಿ, ದ್ಯಾಮಣ್ಣ ನೀಲಗುಂದ, ಸಿದ್ದು ಪಲ್ಲೇದ, ನಿಂಗಪ್ಪ ಹುಗ್ಗಿ, ಬಾಬು ಸುಂಕದ, ಅಶೋಕ ಕರೂರ, ಪ್ರಭಣ್ಣ ಗೋಡಿ, ರಾಜಕುಮಾರ ಕಟ್ಟಿಮನಿ, ಮುತ್ತಪ್ಪ ಮೂಲಿಮನಿ, ಮಂಜುನಾಥಸ್ವಾಮಿ ಹಿರೇಮಠ, ರವಿ ವಗ್ಗನವರ, ಸುರೇಶ ಹೆಬಸೂರ, ಮಂಜುನಾಥ ಶಾಂತಗೇರಿ, ಮೋಹನ ಕೋರಿ, ಸಿದ್ದಪ್ಪ ಈರಗಾರ, ಮಂಜುನಾಥ ಈರಗಾರ, ಸುರೇಶ ಶಿವಳ್ಳಿ, ವಿನೋದ ಹಂಸನೂರ ಮುಂತಾದವರಿದ್ದರು.

ಇದೇ ಸಂದರ್ಭದಲ್ಲಿ ಗ್ರಾಮೀಣ ಮಂಡಲ ಹಿಂದಿನ ಅಧ್ಯಕ್ಷರಾದ ದ್ಯಾಮಣ್ಣ ನೀಲಗುಂದರಿಂದ ನೂತನ ಅಧ್ಯಕ್ಷ ಬೂದಪ್ಪ ಹಳ್ಳಿ ಅವರಿಗೆ ಪಕ್ಷದ ಧ್ವಜ ಹಸ್ತಾಂತರಿಸಲಾಯಿತು.

## ಮೂಲಚಂದ ಬನ್ಸಾಲಿ ನಿಧನ : ನೇತ್ರ ದಾನ



■ವಿಜಯಸಾಕ್ಷಿ ಸುದ್ದಿ, ಗದಗ

ಮೃತ ವ್ಯಕ್ತಿಯ ಕಣ್ಣುಗಳು ಮಣ್ಣಿನಲ್ಲಿ, ಅಗ್ನಿಯಲ್ಲಿ ಹಾನಿಯಾಗುವ ಬದಲು ಅಂಧ ವ್ಯಕ್ತಿ ಜಗತ್ತನ್ನು ನೋಡುವಂತಾಗಲು ಮೃತ ವ್ಯಕ್ತಿಯ ಕುಟುಂಬದವರ ಒಪ್ಪಿಗೆ-ಸಹಕಾರದೊಂದಿಗೆ ನೇತ್ರ ದಾನಕ್ಕೆ ಮುಂದಾದರು.

ಗದುಗಿನ ಗಣ್ಯ ವ್ಯಾಪಾರಸ್ಥರಾಗಿದ್ದ ಮೂಲಚಂದ ಸೋನಮಲ್‌ಜಿ ಬನ್ಸಾಲಿ (85) ಅವರು ಗುರುವಾರ ನಿಧನರಾದರು. ಸುದ್ದಿ ತಿಳಿದ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಪದಾಧಿಕಾರಿಗಳು ಮೃತರ ನಿವಾಸಕ್ಕೆ ತೆರಳಿ ಸಾಂತ್ವನ ಹೇಳಿದರಲ್ಲದೆ, ಮೃತರ ನೇತ್ರ ದಾನ ಮಾಡುವಂತೆ ಪ್ರೇರಣೆ ನೀಡಿದರು.

ಕುಟುಂಬದವರ ಒಪ್ಪಿಗೆ ಮೇರೆಗೆ ಹುಬ್ಬಳ್ಳಿಯ ಎಂ.ಎಂ. ಜೋಷಿ ಆಸ್ಪತ್ರೆಯ ತಜ್ಞರ ತಂಡ ನಗರಕ್ಕೆ ಆಗಮಿಸಿ ನೇತ್ರ ದಾನದ ಪ್ರಕ್ರಿಯೆ ಪೂರ್ಣಗೊಳಿಸಿದರು. ಈ ಸಂದರ್ಭದಲ್ಲಿ ಮೃತರ ಪತ್ನಿ ಜಮುಬಾಯಿ ಬನ್ಸಾಲಿ, ಸುರೇಶ, ಪ್ರವೀಣ, ರಮೇಶ ಬನ್ಸಾಲಿ, ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ನಿತೀಶ್ ಸಾಲಿ, ಲಿಂಗರಾಜ ತೋಟದ, ರಮೇಶ ಶಿಗ್ಲಿ ಮುಂತಾದವರು ಉಪಸ್ಥಿತರಿದ್ದರು.

## ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ 11 ಕೆ.ವಿ. ಮಾರ್ಗದ ತುರ್ತು ಕಾಮಗಾರಿ ಕೈಗೊಳ್ಳುವ ಸಲುವಾಗಿ ಫೆ. 2ರ ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಲಕ್ಷ್ಮೇಶ್ವರ ಪಟ್ಟಣದ ಹಿರೇಬಣ, ಹುಲಗೇರಿಬಣ, ದೇಸಾಯಿಬಣ, ಹಳೇ ಬಸ್ ಸ್ಟ್ಯಾಂಡ್, ಹೊಸ ಬಸ್ ಸ್ಟ್ಯಾಂಡ್, ದೊಡ್ಡೂರ ರಸ್ತೆಯ ಕೈಗಾರಿಕಾ ಪ್ರದೇಶ, ಪಂಪ ಸರ್ಕಲ್ ಸುತ್ತ ಮುತ್ತಲಿನ ಪ್ರದೇಶ ಹಾಗೂ ಆದ್ರಕಟ್ಟಿ ಗ್ರಾಮದಲ್ಲಿ ವಿದ್ಯುತ್ ಪೂರೈಕೆ ಸ್ಥಗಿತಗೊಳ್ಳಲಿದೆ. ಸಾರ್ವಜನಿಕರು ಸಹಕರಿಸಬೇಕೆಂದು ಹೆಸ್ಕಾಂನ ಸಹಾಯಕ ಕಾರ್ಯ ಕಾರ್ಯ ನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರೈತ ಸಂಪರ್ಕ ಕೇಂದ್ರಕ್ಕೆ ಜಿಲ್ಲಾಧಿಕಾರಿ ದಿವ್ಯ ಪ್ರಭು ದಿಢೀರ್ ಭೇಟಿ

# ವರ್ಷವಾರು ಮಾಹಿತಿ ದಾಖಲಿಸಲು ಸೂಚನೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಶುಕ್ರವಾರ ಬೆಳಿಗ್ಗೆ ನಗರದ ಗಾಂಧಿ ಭವನ ಕಾಮಗಾರಿ ವೀಕ್ಷಣೆಗೆ ತೆರಳಿದ್ದ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು, ಗಾಂಧಿ ಭವನ ಪಕ್ಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಧಾರವಾಡ ರೈತ ಸಂಪರ್ಕ ಕೇಂದ್ರಕ್ಕೆ ದಿಢೀರ್ ಭೇಟಿ ನೀಡಿ, ಅಧಿಕಾರಿಗಳ ಹಾಜರಾತಿ, ಕೇಂದ್ರದ ಕಾರ್ಯಚಟುವಟಿಕೆಗಳನ್ನು ಪರಿಶೀಲಿಸಿದರು.



ಜಿಲ್ಲಾಧಿಕಾರಿಗಳು ಆಗಮನದ ಅಂದಾಜು ಇಲ್ಲದೆ, ಇದ್ದ ಅಧಿಕಾರಿಗಳಿಗೆ, ಅವರ ಆಗಮನ ಸಿಬ್ಬಂದಿಗಳಲ್ಲಿ ಆಶ್ಚರ್ಯ, ಸ್ವಲ್ಪ ಗೊಂದಲ ಮೂಡಿಸಿತು. ಕೇಂದ್ರಕ್ಕೆ ಆಗಮಿಸಿದ ಜಿಲ್ಲಾಧಿಕಾರಿಗಳು ಕಚೇರಿಯಲ್ಲಿ ಯಾರಪ್ಪ ಇದ್ದೀರಿ, ಏನ್ ಕೆಲಸ ಮಾಡುತ್ತಿದ್ದಿರಿ, ರೈತರು ಬರತ್ತಾರಾ, ಏನು ಎಂದು ಅಧಿಕಾರಿಗಳ ವಿಚಾರಣೆ ಆರಂಭಿಸಿದರು.

ಸ್ಥಳದಲ್ಲಿ ಹಾಜರಿದ್ದ ಕೃಷಿ ಅಧಿಕಾರಿ ಮಹಾದೇವ ಸರಶೆಟ್ಟಿ ಕೇಂದ್ರದ ಕಾರ್ಯ ಚಟುವಟಿಗಳನ್ನು ವಿವರಿಸಿದರು. ಧಾರವಾಡ ರೈತ ಸಂಪರ್ಕ ಕೇಂದ್ರದ ವ್ಯಾಪ್ತಿಗೆ 11 ಗ್ರಾಮ ಪಂಚಾಯಿತಿಗಳು, 59 ಗ್ರಾಮಗಳು ಬರುತ್ತವೆ. ಅಂದಾಜು 11 ಸಾವಿರ ರೈತರಿದ್ದು, ಅವರಿಗೆ ಇಲಾಖೆ ಸೇವೆಗಳನ್ನು ನಿಯಮಿತವಾಗಿ ಹಂಗಾಮವಾರು ತಲುಪಿಸುತ್ತಿದ್ದೇವೆ ಎಂದು ಹೇಳಿದರು.

ಆರ್.ಎಸ್.ಕೆಗೆ ಆಗಮಿಸಿದ ಸಹಾಯಕ ಕೃಷಿ ನಿರ್ದೇಶಕ ರಾಜಶೇಖರ ಅಣಗೌಡರ ಔಷಧಿ, ಬೀಜ, ಗೊಬ್ಬರ, ಕಳೆನಾಶಕ, ಬೆಳೆ ಟಾನಿಕ್, ಕೃಷಿ ಉಪಕರಣಗಳ ಬಗ್ಗೆ ಮಾಹಿತಿ ನೀಡಿದರು. ಜಿಲ್ಲಾಧಿಕಾರಿಗಳು ಕೀ ಹಾಕಿದ್ದ ಗೋದಾಮು ಗಮನಿಸಿ, ಸಿಬ್ಬಂದಿ ಕೀ ತರುವವರೆಗೆ ಕಾಯ್ದು, ಅದನ್ನು ತೆರೆಯಿಸಿ ದಾಸ್ತಾನು ಪರಿಶೀಲಿಸಿದರು.

ಗೋದಾಮುವಿನಲ್ಲಿದ್ದ ಸಣ್ಣ ಮತ್ತು ಅತಿ ಸಣ್ಣ ರೈತರು ಕಳೆ ತೆಗೆಯಲು ಬಳಸಬಹುದಾದ ಸೈಕಲ್ ವೀಡರ್‌ಗಳ ಕುರಿತು, ಎತ್ತು ಚಾಲಿತ ಎಡೆಕುಂಟೆಗಳ ಸಾಕಷ್ಟು ದಾಸ್ತಾನು ಇರುವದನ್ನು ಮಾಹಿತಿ ಪಡೆದರು. ರೈತರಿಗೆ ರಿಯಾಯಿತಿ ದರದಲ್ಲಿ ದರದಲ್ಲಿ ಯಾಂತ್ರೀಕರಣ ಯೋಜನೆಯಡಿ ವಿತರಿಸುತ್ತಿರುವ ಹೈಟೆಕ್ ಯಂತ್ರೋಪಕರಣಗಳ ಕುರಿತು ಮಾಹಿತಿ ಪಡೆದರಲ್ಲದೆ, ಕೂರಿಗೆ ರೊಟೊವೇಟರ್, ಎಂ.ಬಿ. ಪ್ಲೋ ಹಾಗೂ ಪವರ್ ವೀಡರ್‌ಗಳ ವಿತರಣಾ ವಹಿಯನ್ನು ಪರಿಶೀಲಿಸಿದರು.

ಕಚೇರಿಯಲ್ಲಿ ನಿರ್ವಹಿಸುವ ವಿವಿಧ ಕಡತಗಳನ್ನು ಪರಿಶೀಲಿಸಿದ ಜಿಲ್ಲಾಧಿಕಾರಿಗಳು, ಫಲಾನುಭವಿಗಳ ಮಾಹಿತಿ ಅನುಕ್ರಮವಾಗಿ ಇರದ ಮತ್ತು ಸರಿಯಾಗಿ ದಾಖಲಿಸದಿರುವದನ್ನು ಗಮನಿಸಿ, ಸರಿಯಾಗಿ ವರ್ಷವಾರು ಮಾಹಿತಿ ದಾಖಲಿಸುವಂತೆ ಎಚ್ಚರಿಕೆ ನೀಡಿದರು.

ರೈತ ಸಂಪರ್ಕ ಕೇಂದ್ರವು ಕೃಷಿ ಇಲಾಖೆಯ ಕ್ಷೇತ್ರಮಟ್ಟದ ಕಚೇರಿ ಆಗಿದೆ. ನಿತ್ಯ ನೂರಾರು ರೈತರು ಕೇಂದ್ರಕ್ಕೆ ಬರುತ್ತಾರೆ. ಅವರ ಬೇಡಿಕೆಗಳನ್ನು ದಾಖಲಿಸಬೇಕು ಮತ್ತು ಅವರ ಕುಂದುಕೊರತೆಗಳನ್ನು ಆಲಿಸಿ, ದಾಖಲಿಸಬೇಕು. ಇದರಿಂದ ರೈತರ, ಕೃಷಿ ವಲಯದ ಸಮಸ್ಯೆಗಳನ್ನು ಮೂಲದಲ್ಲಿ ಗುರುತಿಸಿ, ಜಿಲ್ಲಾ ಮಟ್ಟದಲ್ಲಿ ಪರಿಹಾರಕ್ಕೆ ಕ್ರಮಕೈಗೊಳ್ಳಲು ಸಾಧ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಫೆಬ್ರವರಿ 1ರಿಂದ ಜಿಲ್ಲೆಯ ಎಲ್ಲ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರ ಬೇಡಿಕೆ ವಹಿ ಮತ್ತು ರೈತರ ಕುಂದುಕೊರತೆ ವಹಿಗಳನ್ನು ಪ್ರತ್ಯೇಕವಾಗಿ ಕಡ್ಡಾಯವಾಗಿ ನಿರ್ವಹಿಸಬೇಕು. ಕೃಷಿ ಇಲಾಖೆ ಜಂಟಿ ನಿರ್ದೇಶಕರು ಈ ಕುರಿತು ಜಿಲ್ಲೆಯ ಎಲ್ಲ ರೈತ ಸಂಪರ್ಕ ಕೇಂದ್ರಗಳಿಗೆ ಇಂದೇ ನಿರ್ದೇಶನ ನೀಡಬೇಕು ಎಂದರು.

ರೈತ ಸಂಪರ್ಕ ಕೇಂದ್ರಕ್ಕೆ ಆಗಮಿಸಿದ್ದ ಮುಗದ, ಮಂಡಿಹಾಳ, ಸಣ್ಣ ಸೋಮಾಪುರ ರೈತರನ್ನು ಮಾತನಾಡಿಸಿ,

ಜಿಲ್ಲೆಯ ವಿವಿಧ ತಾಲೂಕುಗಳ ಪ್ರವಾಸ ಸಂದರ್ಭದಲ್ಲಿ ಅಲ್ಲಿನ ರೈತ ಸಂಪರ್ಕ ಕೇಂದ್ರಗಳಿಗೆ ಅನಿರೀಕ್ಷಿತ ಭೇಟಿ ನೀಡಿ, ಅಲ್ಲಿನ ವಹಿಗಳನ್ನು, ಗೋದಾಮ ದಾಸ್ತಾನು ಪರಿಶೀಲಿಸುತ್ತೇನೆ ಮತ್ತು ರೈತರನ್ನು ಮಾತಾಡಿಸಿ ರೈತ ಸಂಪರ್ಕ ಕೇಂದ್ರದ ಸಿಬ್ಬಂದಿಗಳ ಹಾಜರಾತಿ, ರೈತರೊಂದಿಗಿನ ಸ್ಪಂದನೆ ಮತ್ತು ಇಲಾಖೆ ಕಾರ್ಯಕ್ರಮ, ಯೋಜನೆಗಳು ಅರ್ಹರಿಗೆ ತಲುಪಿರುವ ಬಗ್ಗೆ ಮಾಹಿತಿ ಪಡೆದುಕೊಳ್ಳುತ್ತೇನೆ. ಎಲ್ಲರಿಗೂ ಕಚೇರಿ ಸಮಯದಲ್ಲಿ ಸರಿಯಾಗಿ ಹಾಜರಿದ್ದು, ನಿಯಮಾನುಸಾರ ಕರ್ತವ್ಯ ನಿರ್ವಹಿಸಲು ತಿಳಿಸಿ ಎಂದು ಕೃಷಿ ಸಹಾಯಕ ನಿರ್ದೇಶಕರಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳು ರೈತ ಸಂಪರ್ಕ ಕೇಂದ್ರದ ಅನುಕೂಲತೆ ಹಾಗೂ ಅವರ ದೂರುಗಳ ಕುರಿತು ವಿಚಾರಿಸಿದರು. ರೈತ ಸಂಪರ್ಕ ಕೇಂದ್ರಗಳಲ್ಲಿರುವ ಸಿಬ್ಬಂದಿ ಕೊರತೆ ಇರುವದನ್ನು ಗಮನಿಸಿ, ಸರಕಾರದ ಗಮನಕ್ಕೆ ತರುವವದಾಗಿ ಅವರು ತಿಳಿಸಿದರು. ಈ ಸಂದರ್ಭದಲ್ಲಿ ರೈತರು, ಸಿಬ್ಬಂದಿಗಳು ಹಾಜರಿದ್ದರು.



### ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ 801ನೇ ಕೆರೆ ಅಭಿವೃದ್ಧಿ

# ಗ್ರಾಮದ ಕೆರೆಗಳನ್ನು ಶುಚಿಯಾಗಿಟ್ಟುಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ರೋಣ

ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ತಾಲೂಕಿನಲ್ಲಿ ಅನೇಕ ಸಮಾಜಮುಖಿ ಕಾರ್ಯಗಳು ನಡೆಯುತ್ತಿರುವುದು ಒಳ್ಳೆಯ ಬೆಳವಣಿಗೆಯಾಗಿದೆ ಎಂದು ನಿಡಗುಂದಿಕೊಪ್ಪ ಶಿವಯೋಗಮಂದಿರದ ಪೂಜ್ಯರಾದ ಅಭಿನವ ಚೆನ್ನಬಸವ ಶ್ರೀಗಳು ಹೇಳಿದರು.

ಅವರು ಶುಕ್ರವಾರ ಮಾರನಬಸರಿ ಗ್ರಾಮದ ಕೆರೆ ಅಭಿವೃದ್ಧಿಗೆ ಭೂಮಿ ಪೂಜೆಯನ್ನು ನೆರವೇರಿಸಿ ಆಶೀರ್ವಚನ ನೀಡಿದರು.

ಇಂದಿನ ದಿನಗಳಲ್ಲಿ ನೀರು ಸಂಗ್ರಹಣೆ ಅವಶ್ಯಕವಾಗಿದೆ. ಜೀವನ ಸವೆಸಲು ನೀರು ಬೇಕು, ಅಂತರ್ಜಲ ಹೆಚ್ಚಿಸಲು ನೀರು ಸಂಗ್ರಹ ಇರಬೇಕು. ಇದಕ್ಕೆ ಗ್ರಾಮಗಳಲ್ಲಿ ಕೆರೆಯಿರಬೇಕು. ಇದ್ದ ಕೆರೆಯನ್ನು ಶುಚಿಯಾಗಿ ಇಟ್ಟುಕೊಳ್ಳಬೇಕು, ರಕ್ಷಿಸಬೇಕು ಎಂದರು.



ಗ್ರಾಪಂ ಅಧ್ಯಕ್ಷ ವೀರಣ್ಣ ಮರಡಿ ಅಧ್ಯಕ್ಷತೆ ವಹಿಸಿದ್ದರು. ಯೋಗಿಶ ಎ, ಚಂದ್ರು ಮಾರನಬಸರಿ, ಶೇಖರಗೌಡ ಪಾಟೀಲ, ಅಂದಪ್ಪ ಮರಡಿ, ಶರಣಪ್ಪ ಕುರಿ, ಮರ್ತುಜಸಾಬ ಮೋತೆಖಾನ್, ಖಾಧಿರಸಾಬ ಕಳಕಾಪೂರ, ಕಾಶೀಮಸಾಬ ದೋಟಿಹಾಳ, ಶಿವಕುಮಾರ ದಿಂಡೂರ, ಈರಪ್ಪ ನಿಡಗುಂದಿ, ಅಲ್ಲಿಸಾಬ ಸವಡಿ, ಶಿವಪ್ಪ ಜಾಲಿಹಾಳ, ಶಿವಲಿಂಗಪ್ಪ ದಿಂಡೂರ, ಶಂಭುಗೌಡ ಪಾಟೀಲ, ಮುತ್ತಣ್ಣ ಭಜಂತ್ರಿ, ಶಂಕರಗೌಡ ಮಾಲಿಪಾಟೀಲ, ಶ್ರೀಶೈಲ ಶಾಂತಗೇರಮಠ, ಶ್ರೀಕಾಂತ ಕುಲಕರ್ಣಿ, ಅಲ್ಲಾಸಾಬ ಮೋತೆಖಾನ್, ದಿಲ್‌ಶ್ಯಾದಬೇಗಂ

ನಿರ್ದೇಶಕ ಶಿವಾನಂದ ಆಚಾರ್ಯ ಮಾತನಾಡಿ, ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ರಾಜ್ಯದ ಕುಡಿಯುವ ನೀರಿನ ಕೆರೆಗಳ ಅಭಿವೃದ್ಧಿಗೆ 58 ಕೋಟಿ ರೂ ವೆಚ್ಚದಲ್ಲಿ 801 ಕೆರೆಗಳನ್ನು ಪುನಶ್ಚೇತನಗೊಳಿಸಲಾಗಿದೆ. ಮಾರನಬಸರಿ ಗ್ರಾಮದ ಕೆರೆಯು 801ನೇ ಕೆರೆಯಾಗಿದ್ದು, ಸುಮಾರು 5 ಲಕ್ಷ ರೂಗಳನ್ನು ಖರ್ಚು ಮಾಡಿ ಅಭಿವೃದ್ಧಿಪಡಿಸಲಾಗುತ್ತಿದೆ. ಈ ಕಾರ್ಯಗಳಿಗೆ ಗ್ರಾಮಸ್ಥರ ಸಹಕಾರ ಅವಶ್ಯಕವಾಗಿದೆ ಎಂದರು.

ದೋಟಿಹಾಳ, ಹನಮವ್ವ ತಳವಾರ, ವಿರೂಪಾಕ್ಷ ಅಂಗಡಿ, ಲಲಿತಾ ಮಾರನಬಸರಿ, ಪಿಡಿಒ ಎಸ್.ಆರ್. ಸಂಕನೂರ, ಮಹಾಬಲೇಶ್ವರ ಪಟಗಾರ ಸೇರಿದಂತೆ ಗ್ರಾಮದ ಧರ್ಮಸ್ಥಳ ಗುಂಪಿನ ಮಹಿಳೆಯರು ಉಪಸ್ಥಿತರಿದ್ದರು.

### ಶ್ರೀ ವೀರಪ್ಪಜ್ಜನವರ ಜೀವನ ದರ್ಶನ ಪುರಾಣ ಪ್ರವಚನ ಸಮಾರಂಭ ಉದ್ಘಾಟಿಸಿದ ಅನ್ನದಾನ ಶ್ರೀಗಳು

# ವೀರಪ್ಪಜ್ಜನ ಕ್ಷೇತ್ರದಲ್ಲಿರುವವರು ಪುಣ್ಯವಂತರು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹಠಯೋಗಿ ಶ್ರೀ ವೀರಪ್ಪಜ್ಜ ಕೋಡಿಕೊಪ್ಪದವರು. ನರೇಗಲ್ಲು ಮತ್ತು ಕೋಡಿಕೊಪ್ಪಗಳೆರಡೂ ವ್ಯವಹಾರಿಕವಾಗಿ ಮತ್ತು ಭಾವನಾತ್ಮಕವಾಗಿ ಬೆಸೆದುಕೊಂಡ ಸ್ಥಳಗಳು. ಇಂತಹ ಸ್ಥಳದಲ್ಲಿ ಪರಶಿವನ ಅವತಾರವಾದ ಶ್ರೀ ವೀರಪ್ಪಜ್ಜನವರು ಜನಿಸಿದರು. ಇಂತಹ ಮಹಾಮಹಿಮನ ಕ್ಷೇತ್ರದ ವ್ಯಾಪ್ತಿಯಲ್ಲಿ ಜೀವಿಸುತ್ತಿರುವ ನೀವೆಲ್ಲರೂ ಪುಣ್ಯವಂತರೆಂದು ಮುಂಡರಗಿಯ ನಾಡೋಜ ಜಗದ್ಗುರು ಶ್ರೀ ಅನ್ನದಾನೀಶ್ವರ ಮಹಾಸ್ವಾಮಿಗಳು ಹೇಳಿದರು.

ಗುರುವಾರ ಸಂಜೆ ಶ್ರೀ ವೀರಪ್ಪಜ್ಜನವರ ಜೀವನ ದರ್ಶನ ಪುರಾಣ ಪ್ರವಚನದ ಸಮಾರಂಭವನ್ನು ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.

ಎಂದಿಗೂ ಯಾವುದು ಹಳತು ಎನ್ನಿಸುವುದಿಲ್ಲವೋ ಅದು ಪುರಾಣ. ಜಗತ್ತಿನಲ್ಲಿ ಅದೆಷ್ಟೋ ಪುರಾಣಗಳಿವೆ. ಅವೆಲ್ಲದರಲ್ಲಿಯೂ ಶ್ರೀ ವೀರಪ್ಪಜ್ಜನವರ ಪುರಾಣವು ಬಹಳಷ್ಟು ವೈಶಿಷ್ಟ್ಯತೆಯಿಂದ ಕೂಡಿದೆ. ನಿತ್ಯವೂ ಅದನ್ನು ಕೇಳಿ ನೀವೆಲ್ಲ ಪುನೀತರಾಗಬೇಕು. ಜೀವನದಲ್ಲಿ ನೆಮ್ಮದಿಯಿಂದ ಬದುಕಲು ದೇವರಿದ್ದಾನೆ ಮತ್ತು ನಾವು ಖಂಡಿತ ಸಾಯುತ್ತೇವೆ ಎಂಬ ಎರಡು ವಿಷಯಗಳನ್ನು ನೆನಪಿನಲ್ಲಿಡಬೇಕು.



ನಾವು ಬೇರೆಯವರಿಗೆ ಮಾಡಿದ ಉಪಕಾರವನ್ನು, ಬೇರೆಯವರಿಂದ ನಮಗಾದ ಅಪಕಾರವನ್ನು ಮರೆಯಬೇಕೆಂದು ಶ್ರೀಗಳು ತಿಳಿಸಿದರು.

ಉದ್ಬೋಧಕ ನುಡಿಗಳನ್ನು ನುಡಿದ ಓಂಕಾರಗಿರಿ ಮಠದ ಶ್ರೀ ಫಕೀರೇಶ್ವರ ಪಟ್ಟಾಧ್ಯಕ್ಷರು ಆಶೀರ್ವಚನ ನೀಡಿ, ಈ ಜಗತ್ತಿನಲ್ಲಿ ಯಾವುದೂ ಶಾಶ್ವತವಲ್ಲ. ಇದನ್ನೇ ಶ್ರೀ ವೀರಪ್ಪಜ್ಜನವರು ತಮ್ಮ ವೇದ ವಾಕ್ಯದಲ್ಲಿ ತಿಳಿಸಿದ್ದಾರೆ. ಇದನ್ನು ಅರ್ಥಮಾಡಿಕೊಂಡವರು ಜೀವನದಲ್ಲಿ ಗೆದ್ದಂತೆ. ಶ್ರೀ ವೀರಪ್ಪಜ್ಜನವರು ತಮ್ಮನ್ನು ತಾವು ಸುಟ್ಟುಕೊಂಡು ಈ ಜಗತ್ತಿಗೆ ಬೆಳಕು ನೀಡಿದ ಮಹಾಮಹಿಮರು ಎಂದರು.

ರೋಣ ಬೂದೀಶ್ವರ ಮಠದ ಪ.ಪೂ. ಡಾ. ವಿಶ್ವನಾಥ ಮಹಾಸ್ವಾಮಿಗಳು ಪುರಾಣ ಪ್ರಾರಂಭಿಸಿದರು. ಚಿಕ್ಕಮನ್ನಾಪುರದ ಹನುಮಂತ ಮೇಟಿ ಸಂಗೀತ ಮತ್ತು ಬರದೂರಿನ ಶಾಂತಕುಮಾರ ಹಿರೇಮಠ ತಬಲಾ ಸಾಥ್ ನೀಡಿದರು. ಪುಣ್ಯಾರಾಧನೆ ಶತಮಾನೋತ್ಸವಕ್ಕೆ ದಾನ ನೀಡಿದ ಮಹನೀಯರನ್ನು ಸನ್ಮಾನಿಸಲಾಯಿತು. ಧುರೀಣ ರವಿ ದಂಡಿನ

ದಿವ್ಯ ಸಾನ್ನಿಧ್ಯ ವಹಿಸಿದ್ದ ಕಪೋತಗಿರಿಯ ಶ್ರೀ ಶಿವಕುಮಾರ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಶ್ರೀ ವೀರಪ್ಪಜ್ಜನವರು ಹುಚ್ಚರಲ್ಲ. ಅವರನ್ನು ಹುಚ್ಚರೆಂದು ಕರೆಯುತ್ತಿರುವ ನಾವು ಹುಚ್ಚರು. ಸಂಸಾರದ ಹಿಂದೆ ಬಿದ್ದು ಆಧ್ಯಾತ್ಮವನ್ನೆ ಮರೆತು ಬಾಳುತ್ತಿರುವ ನಾವು ಮೂಢರು. ಪುರಾಣ ಶ್ರವಣದಿಂದ ಜ್ಞಾನ ಸಿಗುತ್ತದೆ. ಅದರಲ್ಲಿಯೂ ಶ್ರೀ ವೀರಪ್ಪಜ್ಜನವರ ಪುರಾಣ ಖಂಡಿತ ನಿಮ್ಮ ಬಾಳಿಗೆ ಬೆಳಕು ನೀಡುತ್ತದೆ. ನಿತ್ಯವೂ ಕೇಳಿ ಬಾಳಿಗೆ ಬೆಳಕು ತಂದುಕೊಳ್ಳಿ. ಶ್ರೀ ವೀರಪ್ಪಜ್ಜನವರಿಂದ ನರೇಗಲ್ಲ ಮತ್ತು ಕೋಡಿಕೊಪ್ಪಕ್ಕೆ ಈ ನಾಡಿನಲ್ಲಿ ದೊಡ್ಡ ಹೆಸರಿದೆ ಎಂದು ತಿಳಿಸಿದ ಶ್ರೀಗಳು, ವೀರಪ್ಪಜ್ಜನವರ ಜ್ಞಾನ ಪ್ರಸಾದ, ಅನ್ನ ಪ್ರಸಾದವನ್ನು ಸ್ವೀಕರಿಸಿ ನೀವೆಲ್ಲರೂ ಪುಣ್ಯವಂತರಾಗಿರಿ ಎಂದರು.

ಸಭೆಯನ್ನುದ್ದೇಶಿಸಿ ಮಾತನಾಡಿದರು. ವೇದಿಕೆಯ ಮೇಲೆ ಕುಕನೂರಿನ ಗುದ್ನೆಪ್ಪ ಮಠದ ಸ್ವಾಮಿಗಳು, ಟ್ರಸ್ಟ್ ಕಮಿಟಿ ಅಧ್ಯಕ್ಷ ಡಾ. ಎಂ.ಸಿ. ಚಪ್ಪನ್ನಮಠ, ನಿವೃತ್ತ ಶಿಕ್ಷಕ ಎಂ.ಎ. ಹಿರೆವಡೆಯರ ಇದ್ದರು. ನಿವೃತ್ತ ಪ್ರಾಚಾರ್ಯ ಬಿ.ಆರ್. ಜಾಲೀಹಾಳ ಸ್ವಾಗತಿಸಿದರು. ಡಾ. ಕಲ್ಲಯ್ಯ ಹಿರೇಮಠ ನಿರೂಪಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka